RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.


# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning



ಚನ್ನು ಮೆನ್ಸ್‌ವೇರ್
ಕೊಳ್ಳಿಯವರ ಕ್ರಾಸ್,
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್, ಆಫೀಸ್ ಹತ್ತಿರ,
ಜೇಂಟ್ಸ್ ಸ್ಪೇಷಲಿಸ್ಟ್ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708



ಎಲ್ಲರಿಗೂ ಸಮಾನ ಅವಕಾಶ ನೀಡಿ ಸದನದ ಘನತೆ ಎತ್ತಿಹಿಡಿಯುವೆ » 2

ಪುರಸಭೆ ಮುಖ್ಯಾಧಿಕಾರಿ ಗದ್ದಿಗೌಡರಗೆ ರಾಷ್ಟ್ರೀಯ ಸಮಾಜ ಸೇವಾ ರತ್ನ ಪ್ರಶಸ್ತಿ » 3

17 ವರ್ಷಗಳ ಸೈನ್ಯ ಸೇವೆ ಬಳಿಕ ತಾಯ್ನಾಡಿಗೆ ರಹಿಮಾನ ಹೆಬ್ಬಳ್ಳಿ » 4


ಸಂಪುಟ(Volume): 1 ಸಂಚಿಕೆ (Issue): 82 ● ಪುಟ (Page): 4 ● ದರ: Rs. 4 ಶನಿವಾರ 3 ಅಕ್ಟೋಬರ್ 2026 ● 3 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಕ್ಯಾಪ್ಟನ್ ಸ್ಮಿತ್‌ಗೆ ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ

## ಸಹ ಪೈಲಟ್‌ನಿಂದ ವಿಮಾನ ಪತನ ಯತ್ನ | ನೂರಾರು ಜೀವ ಉಳಿಸಿದ ಭಾರತೀಯ

**ಸತ್ಯಮಿಥ್ಯ ನ್ಯೂಸ್ ಡೆಸ್ಕ್ ನವದೆಹಲಿ:** ಯುನೈಟೆಡ್ ಅರಬ್ ಎಮಿರೇಟ್ಸ್‌ನಿಂದ (ಗಂಇ) ಇಸ್ರೇಲ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನ ಈಚ1073ರಲ್ಲಿ ಒಮಾನ್ ಮೂಲದ ಸಹ ಪೈಲಟ್‌ವೊಬ್ಬ ವಿಮಾನವನ್ನು ಪತನಗೊಳಿಸಲು ಯತ್ನಿಸಿದ ಹಾಗೂ ಚೂರಿ ಇರಿದ ಗಂಭೀರ ಘಟನೆಯ ನಡುವೆ, ಧೈರ್ಯದಿಂದ ಪರಿಸ್ಥಿತಿ ನಿಭಾಯಿಸಿ ಪ್ರಯಾಣಿಕರು ಮತ್ತು ಸಿಬ್ಬಂದಿಯ ಜೀವ ಉಳಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ವಿಡಿಯೋ ಕಾಲ್ ಮೂಲಕ ಮಾತುಕತೆ ನಡೆಸಿದರು.

ಮಾತುಕತೆಯ ವೇಳೆ ಮೋದಿ ಅವರು ಪೈಲಟ್‌ನ ಧೈರ್ಯ, ಸಮಯಪ್ರಜ್ಞೆ ಮತ್ತು ಸ್ಥೈರ್ಯವನ್ನು ಶ್ಲಾಘಿಸಿ, ಶೀಘ್ರ ಗುಣಮುಖರಾಗುವಂತೆ ಹಾರೈಸಿದರು. 174 ಪ್ರಯಾಣಿಕರು ಹಾಗೂ 8 ಸಿಬ್ಬಂದಿಯನ್ನು ಹೊಂದಿದ್ದ ಈ ವಿಮಾನದಲ್ಲಾದ ಅಪಾಯವನ್ನು ತಪ್ಪಿಸುವಲ್ಲಿ ಮಚ್ಚಾರ್ ಪ್ರಮುಖ ಪಾತ್ರ ವಹಿಸಿದ್ದಾರೆ.

**ಹನುಮಾನ್ ಚಾಲೀಸಾ ಪಠಿಸಿದ್ದಾಗಿ ವಿವರಿಸಿದ ಕ್ಯಾಪ್ಟನ್:** ಪ್ರಧಾನಿ ಜೊತೆ ಭೀಕರ ಅನುಭವ ಹಂಚಿಕೊಂಡ 39 ವರ್ಷದ ಕ್ಯಾಪ್ಟನ್ ಸ್ಮಿತ್ ಮಚ್ಚಾರ್, ದಾಳಿಯ ಸಂದರ್ಭದಲ್ಲಿ ತಾವು ಹನುಮಾನ್ ಚಾಲೀಸಾ ಪಠಿಸುತ್ತಿದ್ದುದಾಗಿ ತಿಳಿಸಿದರು. "ನನಗೆ ಸಾಕಷ್ಟು ಗಾಯಗಳಾಗಿದ್ದವು. ಕಣ್ಣು ಮುಚ್ಚಿದ್ದರೂ ವಿಮಾನದಲ್ಲಿ ಏನಾಗುತ್ತಿದೆ ಎಂಬುದನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಯಿತು. ನಾನು ಕೆಳಗೆ ಬಿದ್ದಿದ್ದೆ, ಆದರೆ ಎದ್ದು ನಿಲ್ಲದಿದ್ದರೆ ಸತ್ತೇ ಹೋಗುತ್ತಿದ್ದೆ ಎಂಬುದು ಅರ್ಥವಾಯಿತು. ಕೊನೆಯ ಪ್ರಯತ್ನವಾಗಿ ಕಾಕ್‌ಪಿಟ್ ಬಾಗಿಲು ತೆರೆಯಲು ಪ್ರಯತ್ನಿಸಿದೆ. ಬಾಗಿಲು ತೆರೆದ ಬಳಿಕ ಉಳಿದವರೆಲ್ಲರೂ ಒಳಗೆ ಬಂದರು. ಘಟನೆಯಲ್ಲಿ ಪ್ರತಿಯೊಬ್ಬರೂ ಸಮಾನ ಪಾತ್ರ ವಹಿಸಿದ್ದಾರೆ" ಎಂದು ತಾವು ಜೀವಕ್ಕಾಗಿ ಹೋರಾಡಿದ ಕ್ಷಣಗಳನ್ನು ಪ್ರಧಾನಿಗೆ ವಿವರಿಸಿದರು. 17 ವರ್ಷಕ್ಕೂ ಹೆಚ್ಚು ಕಾಲ ವಿಮಾನ ಹಾರಿಸುತ್ತಿದ್ದು, ಕಳೆದ 11 ವರ್ಷಗಳಿಂದ ಕ್ಯಾಪ್ಟನ್ ಆಗಿ ಕಾರ್ಯನಿರ್ವಹಿಸುತ್ತಿರುವುದಾಗಿ ಅವರು ಹೇಳಿದರು.

**ಸೌದಿ ಅರೇಬಿಯಾ ಮತ್ತು ಯುಎಇಯಲ್ಲಿ ಚಿಕಿತ್ಸೆ:** ಘಟನೆಯ ಬಳಿಕ ವಿಮಾನವನ್ನು ಸೌದಿ ಅರೇಬಿಯಾದ ತಬೂಕ್‌ನಲ್ಲಿ ಇಳಿಸಲಾಯಿತು. ಆರಂಭದಲ್ಲಿ ತಬೂಕ್‌ನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಚ್ಚಾರ್ ಅವರನ್ನು ಬಳಿಕ ಯುಎಇಗೆ ಸ್ಥಳಾಂತರಿಸಲಾಯಿತು. ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿರುವ ವಿಡಿಯೋದಲ್ಲಿ ತಲೆಗೆ



ಬ್ಯಾಂಡೇಜ್ ಮತ್ತು ಮೂಗಿಗೆ ಟ್ಯೂಬ್ ಅಳವಡಿಸಿಕೊಂಡಿರುವ ಸ್ಮಿತ್, ಆಸ್ಪತ್ರೆಯ ಮಂಚದ ಮೇಲಿಂದಲೇ ಪ್ರಧಾನಿ ಮೋದಿ ಅವರೊಂದಿಗೆ ಮಾತನಾಡುತ್ತಿರುವುದು ಕಂಡುಬಂದಿದೆ. ಪ್ರಧಾನಿಯವರ ಪ್ರೋತ್ಸಾಹದ ಮಾತುಗಳಿಗೆ ಭಾವುಕರಾದ ಸ್ಮಿತ್, ಇದು ತಮ್ಮ ಜೀವನದ ವಿಶೇಷ ಕ್ಷಣಗಳಲ್ಲಿ ಒಂದಾಗಿದೆ ಎಂದಿದ್ದಾರೆ.

**ಕುಟುಂಬಸ್ಥರಿಗೆ ಭರವಸೆ ನೀಡಿದ್ದ ಪ್ರಧಾನಿ:** ಇದಕ್ಕೂ ಒಂದು ದಿನ ಮೊದಲು (ಗುರುವಾರ) ಪ್ರಧಾನಿ ಮೋದಿ ಅವರು ಸ್ಮಿತ್ ಅವರ ಪತ್ನಿ, ತಂದೆ-ತಾಯಿ ಗೀತಾ ಅವರೊಂದಿಗೆ ಮಾತನಾಡಿದ್ದರು. ಭಾರತೀಯ ರಾಯಭಾರ ಕಚೇರಿಗಳ ಮೂಲಕ ಅಗತ್ಯವಿರುವ ಎಲ್ಲ ನೆರವು ನೀಡುವುದಾಗಿ ಭರವಸೆ ನೀಡಿದ್ದರು. ಸಂಭಾಷಣೆಯ ವೇಳೆ ಪ್ರಧಾನಿ ಮೋದಿ, "ಭಾರತೀಯರು ಜೀವ ತೆಗೆಯುವವರಲ್ಲ, ಇತರರ ಜೀವ ಉಳಿಸಲು ತಮ್ಮ ಜೀವವನ್ನೇ ಅಪಾಯಕ್ಕೆ ಒಡ್ಡುವವರು ಎಂದು ದೇಶ ಹೆಮ್ಮೆಯಿಂದ ಹೇಳಿಕೊಳ್ಳಬಹುದು. ಸ್ಮಿತ್ ಜಗತ್ತಿಗೆ ಅಹಿಂಸೆಯ ಅರ್ಥವನ್ನು ತೋರಿಸಿದ್ದಾರೆ" ಎಂದು ಬಣ್ಣಿಸಿದರು. ಗಾಯಗೊಂಡ ಪೈಲಟ್‌ಗೆ ಚಿಕಿತ್ಸೆ ನೀಡುತ್ತಿರುವ ಸೌದಿ ಅರೇಬಿಯಾ ಮತ್ತು ಯುಎಇ ಸರ್ಕಾರಗಳಿಗೆ ಧನ್ಯವಾದ ಸಲ್ಲಿಸಿದ ಮೋದಿ, ಸ್ಮಿತ್‌ಗೆ ತಾವು ಕೇವಲ ಒಂದು ಫೋನ್ ಕಾಲ್ ದೂರದಲ್ಲಿರುವುದಾಗಿ ಭರವಸೆ ನೀಡಿದರು. ಪ್ರಸ್ತುತ ಸಹ ಪೈಲಟ್ ವಿಮಾನ ಪತನಗೊಳಿಸಲು ಯತ್ನಿಸಿದ ಆರೋಪದ ಕುರಿತು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

# ಗಾಂಧಿ ಸ್ಮಾರಕ ಸ್ತಂಭ ಅನಾವರಣ

## ರಾಜ್ಯದ 87 ಗಾಂಧಿ ಹೆಜ್ಜೆಗುರುತಿನ ಸ್ಥಳಗಳಲ್ಲಿ ಸ್ಮಾರಕ ಸ್ತಂಭ ನಿರ್ಮಾಣ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಅನುಷ್ಠಾನ: ಡಿಕೆಶಿ

**ಸತ್ಯಮಿಥ್ಯ ನ್ಯೂಸ್ ಡೆಸ್ಕ್ ಬೆಂಗಳೂರು:** ಮಹಾತ್ಮ ಗಾಂಧೀಜಿಯವರು ಕರ್ನಾಟಕದಲ್ಲಿ ಭೇಟಿ ನೀಡಿದ್ದ ವಿವಿಧ 87 ಐತಿಹಾಸಿಕ ಸ್ಥಳಗಳಲ್ಲಿ 'ಗಾಂಧಿ ಸ್ಮಾರಕ ಸ್ತಂಭ' ಸ್ಥಾಪಿಸುವ ಕರ್ನಾಟಕ ಸರ್ಕಾರದ ಆಯವ್ಯಯ ಘೋಷಣೆಯ ಭಾಗವಾಗಿ, ರಾಜ್ಯದ ಮೊದಲ ಗಾಂಧಿ ಸ್ಮಾರಕ ಸ್ತಂಭವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಿನ್ನೆ ಬೆಂಗಳೂರಿನ ಸರ್ಕಾರಿ ಕಲಾ ಕಾಲೇಜು (ಜಿಎಎಸ್ ಕಾಲೇಜು) ಆವರಣದಲ್ಲಿ ಅನಾವರಣಗೊಳಿಸಿದರು.

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಐತಿಹಾಸಿಕ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷಗಳು ಪೂರೈಸಿದ ನೆನಪಿಗಾಗಿ "ಗಾಂಧಿ ಭಾರತ" ಅಭಿಯಾನದಡಿಯಲ್ಲಿ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಈ ಸ್ಮಾರಕ ಸ್ತಂಭಗಳನ್ನು ನಿರ್ಮಿಸಲಾಗುತ್ತಿದೆ.

ಶಾಸಕರು ಹಾಗೂ ಗಾಂಧಿ ಭಾರತ ಶತಮಾನೋತ್ಸವ ಸಮಿತಿ ಅಧ್ಯಕ್ಷರಾದ ಎಚ್. ಕೆ. ಪಾಟೀಲ, ಕರ್ನಾಟಕ ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಹಾಗೂ ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷರಾದ ಬಿ.ಎಲ್.ಶಂಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಜೆ. ಮಂಜುನಾಥ್ ಐ.ಎ.ಎಸ್. ಸೇರಿದಂತೆ ಗಾಂಧಿ ಭಾರತ ಸಮಿತಿಯ ಪದಾಧಿಕಾರಿಗಳು, ಸರ್ಕಾರಿ ಕಲಾ ಕಾಲೇಜಿನ ಪ್ರಾಧ್ಯಾಪಕರು, ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಈ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಗಾಂಧಿ ಸ್ಮಾರಕ ಸ್ತಂಭ ಸಿದ್ದಡಿಸಿದ ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್, ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲರಾದ ನಾಗೇಂದ್ರ ಕುಮಾರ್ ಜೆ.ಸಿ. ನಿರ್ಮಿತಿ ಕೇಂದ್ರದ ಅಭಿಯಂತರರಾದ



ರಾಜೀವ್ ಅವರನ್ನು ಸನ್ಮಾನಿಸಿದರು.

ಅಲ್ಲದೇ ಈ ಮಹತ್ವದ ಕಾರ್ಯಕ್ರಮಕ್ಕೆ ಸಾಕ್ಷಿಯಾದಂತೆ ಸರ್ಕಾರಿ ಕಲಾ ಕಾಲೇಜಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಗಿಡ ನೆಟ್ಟು ನೀರೆ-ರದರು.

**ಬೆಂಗಳೂರಿನ ಐತಿಹಾಸಿಕ ಕ್ಷಣ:** ಮಹಾತ್ಮ ಗಾಂಧೀಜಿಯವರು ತಮ್ಮ ಪತ್ನಿ ಕಸ್ತೂರಬಾ ಅವರೊಂದಿಗೆ 1915ರ ಮೇ 8ರ ಶನಿವಾರದಂದು ಪ್ರಥಮ ಬಾರಿಗೆ ಬೆಂಗಳೂರಿಗೆ ಆಗಮಿಸಿದ್ದರು. ಅಂದು ಆಗಿನ ಸರ್ಕಾರಿ ಪ್ರೌಢಶಾಲೆಗೆ (ಇಂದಿನ ಸರ್ಕಾರಿ ಕಲಾ ಕಾಲೇಜು) ಭೇಟಿ ನೀಡಿ, ತಮ್ಮ ರಾಜಕೀಯ ಗುರುಗಳಾಗಿದ್ದ ಗೋಪಾಲಕೃಷ್ಣ ಗೋಖಲೆ ಅವರ ಭಾವಚಿತ್ರವನ್ನು ಅನಾವರಣಗೊಳಿಸಿದ್ದರು. ಅದರ ನೆನಪಿಗಾಗಿ ಈ ಸಭಾಂಗಣಕ್ಕೆ ಬಾಪೂಜಿ ಅವರ ಹೆಸರು ಇರಿಸಲಾಗಿದ್ದು, ಈಗ ಇದೇ ಆವರಣದಲ್ಲಿ ಮೊದಲ ಗಾಂಧಿ ಸ್ಮಾರಕ ಸ್ತಂಭ ನಿರ್ಮಿಸಲಾಗಿದೆ.

**ಆಕರ್ಷಕ ಸ್ಮಾರಕ ಸ್ತಂಭದ ವಿವರ:** ಶಿಲ್ಪಿ: ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರು ಈ ಸ್ಮಾರಕದ ಆಕರ್ಷಕ ಕಲಾಕೃತಿಯನ್ನು ಸಿದ್ಧಪಡಿಸಿದ್ದು, ಸ್ಮಾರಕವು 10 ಅಡಿ ಎತ್ತರ ಹಾಗೂ 3 1/4 (ಮೂರು ಕಾಲು) ಅಡಿ ಅಗಲದ ಏಕಶಿಲಾ ಗ್ರಾನೈಟ್ ಕಲಾಕೃತಿ ಹೊಂದಿದೆ.

**ವಿನ್ಯಾಸ:** ಸ್ತಂಭದ ಮೇಲ್ಭಾಗದಲ್ಲಿ ನಾಲ್ಕು ಮುಖ ಸಿಂಹವುಳ್ಳ ರಾಷ್ಟ್ರೀಯ ಲಾಂಛನ, ಅದರ ಕೆಳಗೆ ಅಶೋಕ ಚಕ್ರ, ಧ್ಯಾನಸ್ಥ ಮಹಾತ್ಮ ಗಾಂಧೀಜಿ, ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳು, ಗಾಂಧೀಜಿಯವರ ಸಹಿ ಹಾಗೂ ಚರಕದ ಚಿತ್ರಣವಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಎಂ. ಎನ್. ಅನುಚೇತ್ ತಿಳಿಸಿದ್ದಾರೆ.

# ಚಿನ್ನ ಕಳ್ಳಸಾಗಣೆ ಪ್ರಕರಣ, ನಟಿ ರನ್ಯಾ ರಾವ್‌ಗೆ 89 ಕೋಟಿ ದಂಡ



**ಬೆಂಗಳೂರು:** ಬಹುಕೋಟಿ ರೂ. ಚಿನ್ನ ಕಳ್ಳಸಾಗಣೆ ಪ್ರಕರಣದ ಆರೋಪಿಯಾಗಿರುವ ಚಿತ್ರ ನಟಿ ಹರ್ಷವರ್ಧಿನಿ ಅಲಿಯಾಸ್ ರನ್ಯಾ ರಾವ್‌ಗೆ ಕಸ್ಟಮ್ಸ್ ಇಲಾಖೆಯು ಬರೋಬ್ಬರಿ 89 ಕೋಟಿ ರೂ. ದಂಡ ವಿಧಿಸಿದೆ. ರನ್ಯಾ ರಾವ್ ಸಹ ಆರೋಪಿಗಳ ಜೊತೆ ಸೇರಿ ದುಬೈನಿಂದ ಭಾರತಕ್ಕೆ 2024ರ ಮಾ.7ರಿಂದ 2025ರ ಫೆ.18ರವರೆಗೆ ಅಕ್ರಮವಾಗಿ ಚಿನ್ನ ಸಾಗಾಟ ಮಾಡಿರುವುದನ್ನು ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಪತ್ತೆ ಹಚ್ಚಿ, ರನ್ಯಾ ರಾವ್, ತರುಣ್ ಕೊಂಡರಾಜು, ಸಾಹಿಲ್ ಜೈನ್ ಹಾಗೂ ಭರತ್‌ಕುಮಾರ್ ಜೈನ್ ಎಂಬುವರನ್ನು ಬಂಧಿಸಿತ್ತು.

**ಚಿನ್ನ ಕಳ್ಳಸಾಗಣೆ ಮಾಡಿದ ನಟಿ ರನ್ಯಾರಾವ್‌ಗೆ 89 ಕೋಟಿ ದಂಡ:** ಗುಂಪುಗೂಡಿ ಚಿನ್ನದ ಕಳ್ಳಸಾಗಣೆ ಜಾಲದಲ್ಲಿ ಸಕ್ರಿಯವಾಗಿದ್ದ ಸಂಗತಿ ಸಾಕ್ಷ್ಯಾಧಾರಗಳ ಸಮೇತ ದೃಢಪಟ್ಟಿದೆ. ಒಂದು ವರ್ಷದ ಅವಧಿಯಲ್ಲಿ 113 ಕೆ.ಜಿ. ಚಿನ್ನ ಸಾಗಾಟ ಮಾಡಿದ್ದರು. ಹೀಗಾಗಿ, ಕಸ್ಟಮ್ಸ್ ಕಾಯಿದೆ-1962ರ ಅನುಸಾರ ರನ್ಯಾ ರಾವ್ 89 ಕೋಟಿ ರೂ. ದಂಡ ಪಾವತಿಸಬೇಕೆಂದು ಕಸ್ಟಮ್ಸ್ ಇಲಾಖೆ ಜಂಟಿ ನಿರ್ದೇಶಕ ಡಾ.ಸಂದೀಪ್ ಗುಂಜಾಲ್ ಆದೇಶಿಸಿದ್ದಾರೆ.

**ಪ್ರಕರಣದ ಇತರೆ ಆರೋಪಿಗಳಿಗೂ ದಂಡ:** ಪ್ರಕರಣ ಸಂಬಂಧ 399 ಪುಟಗಳ ವಿಸ್ತೃತ ಆದೇಶ ಹೊರಡಿಸಿರುವ ಸಂದೀಪ್ ಗುಂಜಾಲ್, ಪ್ರಕರಣದ ಇತರೆ ಆರೋಪಿಗಳಾದ ಸಾಹಿಲ್ ಜೈನ್ ಹಾಗೂ ಭರತ್‌ಕುಮಾರ್ ಜೈನ್‌ಗೆ ತಲಾ 53.06 ಕೋಟಿ ರೂ., ತರುಣ್ ಕೊಂಡರಾಜುಗೆ 49.51 ಕೋಟಿ ರೂ. ದಂಡ ವಿಧಿಸಿದ್ದಾರೆ. ಅಲ್ಲದೆ, ದಂಡ ಪಾವತಿಸುವ ಸಂಬಂಧ ರನ್ಯಾ ರಾವ್ ಹಾಗೂ ಇತರೆ ಆರೋಪಿಗಳಿಗೆ ನೋಟಿಸ್ ನೀಡಿದ್ದಾರೆ. ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಈ ಹಿಂದೆ ಡಿಆರ್‌ಐ, ಶೋಕಾಸ್ ನೋಟಿಸ್ ನೀಡಿ ದಂಡದ ಬಗ್ಗೆ ಮಾಹಿತಿ ಕೊಟ್ಟಿತ್ತು. ಕಸ್ಟಮ್ಸ್ ಕಾಯಿದೆ ಅನ್ವಯ ಜಂಟಿ ನಿರ್ದೇಶಕರ ಬಳಿ ನೋಟಿಸ್ ಬಗ್ಗೆ ಪರಾಮರ್ಶಿಸುವಂತೆ ಆರೋಪಿಗಳು ಮೇಲ್ಮನವಿ ಸಲ್ಲಿಸಿದ್ದರು. ಆರೋಪಿಗಳು ದಂಡ ಪಾವತಿಸದಿದ್ದರೆ ಆಸ್ತಿ ಮುಟ್ಟುಗೋಲಿಗೂ ಅವಕಾಶವಿದೆ.

# ಹಾಕಿಯಲ್ಲಿ ಭಾರತದ ನಾರಿ ಶಕ್ತಿ ವೈಭವ

**ನಗೋಯಾ: ಭಾರತ ಮಹಿಳಾ ಹಾಕಿ ತಂಡವು ಏಷ್ಯನ್ ಗೇಮ್ಸ್‌ನಲ್ಲಿ ನವ ಇತಿಹಾಸ ಬರೆದಿದೆ. ನಗೋಯಾದಲ್ಲಿ ನಡೆದ ಪ್ರಶಸ್ತಿ ಸುತ್ತಿನ ರೋಚಕ ಕದನದಲ್ಲಿ ಹಾಲಿ ಚಾಂಪಿಯನ್ ಚೀನಾ ತಂಡವನ್ನು 1-0 ಗೋಲುಗಳ ಅಂತರದಿಂದ ಮಣಿಸಿದ ಭಾರತದ ವನಿತೆಯರು, ಬರೋಬ್ಬರಿ 44 ವರ್ಷಗಳ ಬಳಿಕ ಬಂಗಾರದ ಪದಕಕ್ಕೆ ಮುತ್ತಿಕ್ಕಿದ್ದಾರೆ. ಈ ಮಹತ್ವದ ಗೆಲುವಿನೊಂದಿಗೆ ಭಾರತ ತಂಡವು 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ನೇರ ಅರ್ಹತೆಯನ್ನೂ ಸಂಪಾದಿಸಿದೆ. 1982ರಲ್ಲಿ ಮೊದಲ ಬಾರಿಗೆ ಚಿನ್ನ ಗೆದ್ದಿದ್ದ ಭಾರತಕ್ಕೆ ಆ ನಂತರ ಸುವರ್ಣ ಪದಕ ಮರೀಚಿಕೆಯಾಗಿಯೇ ಉಳಿದಿತ್ತು. 1998 ಮತ್ತು 2018ರಲ್ಲಿ ಫೈನಲ್ ಪ್ರವೇಶಿಸಿದರೂ ಅನುಕ್ರಮವಾಗಿ ದಕ್ಷಿಣ ಕೊರಿಯಾ ಹಾಗೂ ಜಪಾನ್ ವಿರುದ್ಧ ಮುಗ್ಗರಿಸಿ ಬೆಳ್ಳಿಗೆ ತೃಪ್ತಿಪಡಬೇಕಾಗಿತ್ತು. ಆದರೆ, ಈ ಬಾರಿ ಯಾವುದೇ ತಪ್ಪುಗಳಿಗೆ ಆಸ್ಪದ ನೀಡದ ಭಾರತೀಯ ಪಡೆ, ಆರಂಭದಿಂದ ಅಂತ್ಯದವರೆಗೂ ಅದ್ಭುತ ಸಂಘಟಿತ ಹೋರಾಟ ನಡೆಸಿ ಚೀನಾವನ್ನು ಕಟ್ಟಿಹಾಕಿತು.**




# ಗಾಂಧೀಜಿ, ಶಾಸ್ತ್ರೀಜಿ ಆದರ್ಶಅಳವಡಿಸಿಕೊಳ್ಳಿ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ

**ಸತ್ಯಮಿಥ್ಯ ಸುದ್ದಿಮೂಲ ಗದಗ :** ದೇಶಕ್ಕೆ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಕೊಡುಗೆ ಅಪಾರವಾದದ್ದು. ಇಬ್ಬರೂ ವಿಭಿನ್ನ ಕಾಲಘಟ್ಟ ಹಾಗೂ ಶೈಲಿಯ ನಾಯಕರಾಗಿದ್ದರೂ, ಅವರ ಅಂತಿಮ ಧ್ಯೇಯ ಮತ್ತು ಉದ್ದೇಶ ಒಂದೇ ಆಗಿತ್ತು. "ಎಲ್ಲರನ್ನೂ ಸಮಾನವಾಗಿ ಕಾಣುವುದು ಮತ್ತು ಇತರರ ನೋವನ್ನು ತನ್ನದೆಂದು ಭಾವಿಸುವುದು" ಇಬ್ಬರ ಮುಖ್ಯ ತತ್ವವಾಗಿತ್ತು. ಗಾಂಧೀಜಿ ಮತ್ತು ಶಾಸ್ತ್ರೀಜಿಯವರ ಆದರ್ಶಗಳು, ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಶುಕ್ರವಾರ ಅಕ್ಟೋಬರ್ (2) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಹಯೋಗದಲ್ಲಿ ಜರುಗಿದ ಮಹಾತ್ಮ ಗಾಂಧೀಜಿಯವರ 157 ನೇ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 122ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜೀವನದಲ್ಲಿ "ಸರಳ ಮತ್ತು ವಿನಮ್ರವಾಗಿರುವುದು ಅತ್ಯಂತ ಕಷ್ಟಕರವಾದ ವಿಷಯ. ಗಾಂಧೀಜಿ ಮತ್ತು ಶಾಸ್ತ್ರೀಜಿ ಇಬ್ಬರೂ ಸರಳತೆ ಹಾಗೂ ವಿನಮ್ರತೆಯ ಸಂಕೇತವಾಗಿದ್ದರು. ಜೀವನದ ಸಂಘರ್ಷದಲ್ಲಿ ಗೆಲ್ಲಲು ಹಾಗೂ ಸಮಾಜದಲ್ಲಿ ಸೋದರತ್ವ ಉಳಿಸಲು ವಿನಮ್ರತೆ ಅತ್ಯಗತ್ಯ".ಗಾಂಧೀಜಿ ಮತ್ತು ಶಾಸ್ತ್ರೀಜಿ ಅವರು ಅತ್ಯುನ್ನತ ಸ್ಥಾನದಲ್ಲಿದ್ದರೂ ಅತ್ಯಂತ ಸರಳತೆಯನ್ನೇ ತಮ್ಮ ಶಕ್ತಿಯನ್ನಾಗಿ ಮಾಡಿಕೊಂಡಿದ್ದರು. ದೇಶದ ಪ್ರಧಾನಿಯಾಗಿದ್ದರೂ ಶಾಸ್ತ್ರೀಜಿ ಅವರಿಗೆ ಸ್ವಂತದ್ದು ಎನ್ನಲು ಏನೂ ಇರಲಿಲ್ಲ; ಇಡೀ ದೇಶವೇ ಅವರ ಕರೆಗೆ ಓಗೊಡುತ್ತಿತ್ತು. ನಿಸ್ವಾರ್ಥ ಸರಳತೆಯಿಂದ ದೇಶದ ಬೃಹತ್




ಬದಲಾವಣೆಗಳನ್ನು ಸಾಧಿಸಬಹುದು ಎಂಬುದಕ್ಕೆ ಇವರೇ ಪ್ರತ್ಯಕ್ಷ ಸಾಕ್ಷಿಯಾಗಿದ್ದಾರೆ ಎಂದರು.

ಇಂದಿನ ಆಧುನಿಕ ಯುಗದಲ್ಲಿ ಜನರು 'ಸೆಲ್ಫಿ' ತೆಗೆದುಕೊಳ್ಳುವ ಭರದಲ್ಲಿ ಸ್ವಾರ್ಥಿಗಳಾಗುತ್ತಿದ್ದಾರೆ . 'ನಾನು', 'ನನ್ನದು' ಎಂಬ ಸಂಕುಚಿತ ಮನೋಭಾವ ಹೆಚ್ಚಾದಂತೆ ಸಮಾಜ ಕಠೋರವಾಗುತ್ತದೆ. ಆದ್ದರಿಂದ 'ನಾನು' ಎಂಬುದನ್ನು ಬಿಟ್ಟು 'ನಾವು', 'ನಮ್ಮದು' ಎನ್ನುವ ಸಾಮೂಹಿಕ ನಾಯಕತ್ವ ಹಾಗೂ ಒಗ್ಗಟ್ಟಿನ ಭಾವನೆಯನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಬೆಳೆಸಿಕೊಳ್ಳಬೇಕಿದೆ ಎಂದು ಹೇಳಿದರು.

ಸ್ವಾತಂತ್ರ್ಯ ಭಾರತಕ್ಕೆ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ನೀಡಿದ ಕೊಡುಗೆ, ಸಂದೇಶ ಹಾಗೂ ತತ್ವಗಳು ಅಂದಿಗೂ, ಇಂದಿಗೂ ಮತ್ತು ಮುಂದಿನ ಪೀಳಿಗೆಗೂ ಸದಾ ಪ್ರಸ್ತುತ ಹಾಗೂ ಚಿರಂತನ" ಎಂದು ಪ್ರತಿಪಾದಿಸಿದರು. ಗಾಂಧೀಜಿ ಮತ್ತು ಶಾಸ್ತ್ರೀಜಿ ಅವರಿಬ್ಬರ ವಯಸ್ಸಿನಲ್ಲಿ 30 ವರ್ಷಗಳ ಅಂತರವಿತ್ತಾದರೂ, ಅವರಿಬ್ಬರ ವಿಚಾರಧಾರೆ ಹಾಗೂ ಅಂತಿಮ ಧ್ಯೇಯ ಒಂದೇ ಆಗಿತ್ತು. "ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣುವುದು ಹಾಗೂ ಸಮಾಜದ ಪ್ರತಿಯೊಬ್ಬರ ನೋವು-ನಲಿವುಗಳನ್ನು ತಮ್ಮದೇ ನೋವೆಂದು ಭಾವಿಸಿ ಸ್ಪಂದಿಸುವುದು" ಅವರಿಬ್ಬರ ಮುಖ್ಯ ಸಿದ್ಧಾಂತವಾಗಿತ್ತು. ಈ ಅನುಕರುಣೆಯ ಭಾವನೆಯಿದ್ದಲ್ಲಿ ಸಮಾಜದಿಂದ ಅನಿಷ್ಟತೆಗಳು ಸಂಪೂರ್ಣ ದೂರವಾಗುತ್ತವೆ ಎಂದರು.

ಸ್ವಾತಂತ್ರ್ಯ ಸಂಗ್ರಾಮ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಗಾಂಧೀಜಿಯವರು "ಮಾಡೂ ಇಲ್ಲವೇ ಮಡಿ" ಕರೆ ನೀಡುವ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರೆ, ಶಾಸ್ತ್ರೀಜಿಯವರು "ಜೈ ಜವಾನ್, ಜೈ ಕಿಸಾನ್" ಘೋಷಣೆಯ ಮೂಲಕ ಸ್ವಾತಂತ್ರ್ಯೋತ್ತರ ಭಾರತದ ಭದ್ರತೆಗೆ ಹಾಗೂ ಅನ್ನದಾತನಿಗೆ ಹೊಸ ಶಕ್ತಿ ತುಂಬಿದರು. ಇಬ್ಬರೂ ದೇಶದ ಸರ್ವಾಂಗೀಣ ಪ್ರಗತಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಅವರು ಮಾತನಾಡಿ, ನಮ್ಮ ಸಾರ್ವಜನಿಕ ಜೀವನದಲ್ಲಿ ಕಾರ್ಯನಿರ್ವಹಿಸುವಾಗ ಗಾಂಧೀಜಿ ಹಾಗೂ ಶಾಸ್ತ್ರೀಜಿಯವರ ಸಿದ್ಧಾಂತಗಳು ಹಾಗೂ ಆದರ್ಶಗಳು ಅತ್ಯಂತ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು. "ಸಾರ್ವಜನಿಕ ಹಾಗೂ ವೃತ್ತಿಪರ ಜೀವನದಲ್ಲಿ ಯಾವುದೇ ನಿರ್ಧಾರ ತೆಗೆದುಕೊಳ್ಳುವಾಗ ಅಥವಾ ಕೆಲಸದಲ್ಲಿ ಸಂಶಯ ಉಂಟಾದಾಗ, ನೀವು ಕಂಡ ಅತ್ಯಂತ ಬಡ ಹಾಗೂ ದುರ್ಬಲ ವ್ಯಕ್ತಿಯನ್ನು ನೆನಪಿಸಿಕೊಳ್ಳಿ. ನಿಮ್ಮ ಈ ಕಾರ್ಯ ಅಥವಾ ನಿರ್ಧಾರದಿಂದ ಆ ವ್ಯಕ್ತಿಗೆ ಹೇಗೆ ಸಹಾಯವಾಗುತ್ತದೆ ಎಂದು ಆಲೋಚಿಸಿ" ಎಂಬ ಗಾಂಧೀಜಿಯವರ ತತ್ವವನ್ನು ನೆನಪಿಸಿದರು. ಈ ದಾರಿಯಲ್ಲಿ ಸಾಗಿದರೆ ನಾವು ಯಾವತ್ತೂ ಸರಿಯಾದ ಮಾರ್ಗದಲ್ಲೇ ಸಾಗುತ್ತೇವೆ ಎಂದು ಜಿ. ಪಂ.ಸಿಇಓ ಮುಕುಲ್ ಜೈನ್ ಅವರು ಹೇಳಿದರು.

ಗಾಂಧೀಜಿಯವರ ಗ್ರಾಮ ಸ್ವರಾಜ್ಯ ಕನಸಿನಂತೆ, ಪ್ರತಿಯೊಂದು ಗ್ರಾಮವೂ ಸ್ವಾವಲಂಬಿ ರಿಪಬ್ಲಿಕ್ ಆಗಿ ಬೆಳೆಯಬೇಕು. ಗ್ರಾಮಗಳ ಉದ್ಧಾರ ಹಾಗೂ ಪ್ರಗತಿಯೇ ದೇಶದ ಪ್ರಗತಿಗೆ ಮೂಲಾಧಾರವಾಗಿದೆ.ಗಾಂಧೀಜಿಹಾಗೂಲಾಲ್‌ಬಹದ್ದೂರ್ ಶಾಸ್ತ್ರಿ ಅವರ ಜೀವನ ಶೈಲಿ ಬೇರೆ ಬೇರೆಯಾಗಿದ್ದರೂ, ಸಾರ್ವಜನಿಕರ ಸೇವೆಯಲ್ಲಿ ಅವರ ಮೂಲ ತತ್ವಗಳಾದ ಸರಳತೆ, ಸತ್ಯ ಮತ್ತು ಅಹಿಂಸೆ ಒಂದೇ ಆಗಿದ್ದವು. ಅವರ ಈ ಆದರ್ಶ ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಹಾಗೂ ಸಾರ್ವಜನಿಕ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಡಾ.ವೆಂಕಟೇಶ್‌ಆಲ್ಕೋಡಹಾಗೂತಂಡದವರಿಂದರಾಷ್ಟ್ರೀಯ ಗೀಯೆ ವಂದೇ ಮಾತರಂ ಮತ್ತು ನಾಡಗೀತೆ ಪ್ರಸ್ತುತ ಪಡಿಸಿ ಮಹಾತ್ಮ ಗಾಂಧೀಜಿಯವರ ಪ್ರೀಯ ಭಜನೆ ಹಾಡಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.

ಎ.ಎಸ್.ಎಸ್. ಕಾಲೇಜಿನ ವಿದ್ಯಾರ್ಥಿಗಳಾದ ಅಕ್ಷಯ, ಸಾಧಿಯ, ಸುಚಿತ್ರ ಅವರಿಂದ ಭಗವದ್ಗೀತೆ, ಕುರಾನ್ , ಬೈಬಲ್ ನ ಆಯ್ದ ಚರಣ ಪಠಿಸಿ ವಿವರಿಸಿದರು. ನಂತರ ಅವರಿಗೆ ಜಿಲ್ಲಾಧಿಕಾರಿಗಳಿಂದ ಗೌರವಿಸಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿಯವರ 157 ನೇ ಜಯಂತಿ 2026 ರ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಶಾಲಾ ಕಾಲೇಜುಗಳಲ್ಲಿ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ, ದ್ವಿತೀಯ, ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್. ಎನ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್, ಉಪವಿಭಾಗಧಿಕಾರಿ ಗಂಗಪ್ಪ ಎಮ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ. ಆರ್. ಮುಂಡರಗಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಮ್. ವಿ ಚಳಗೇರಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್. ಎಸ್. ಬುರಡಿ, ಆಹಾರ ಇಲಾಖೆಯ ಉಪ ನಿರ್ದೇಶಕ ಎಸ್.ಡಿ. ಪಾಟೀಲ್, ಪಶುಸಂಗೋಪನೆ ಇಲಾಖೆಯ ಉಪ ನಿರ್ದೇಶಕ ಡಾ. ಎಚ್.ಬಿ ಹುಲಗಣ್ಣವರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹಣಬರಹಟ್ಟಿ,ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಮಿತ್ ಬಿದರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ವಸಂತ ಮಡ್ಲೂರ ಸೇರಿದಂತೆ ಎಲ್ಲಾ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸತ್ಯಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATYA MITHI
Kannada Daily Morning

# ಎಲ್ಲರಿಗೂ ಸಮಾನ ಅವಕಾಶ ನೀಡಿ ಸದನದ ಘನತೆ, ಸಂಸದೀಯ ಪರಂಪರೆ ಎತ್ತಿಹಿಡಿಯುವೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಸಾಧು-ಸಂತರು, ಶರಣರು ಹಾಗೂ ಹಿರಿಯರ ಆಶೀರ್ವಾದವೇ ತಮ್ಮ ಸಾರ್ವಜನಿಕ ಬದುಕಿನ ಶಕ್ತಿಯಾಗಿದ್ದು, ಪೂಜ್ಯರ ಮಾರ್ಗದರ್ಶನದೊಂದಿಗೆ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಸ್ಥಾನಕ್ಕೆ ದೊರೆತಿರುವ ಜವಾಬ್ದಾರಿಯನ್ನು ನಿಷ್ಠೆ, ಪ್ರಾಮಾಣಿಕತೆ ಹಾಗೂ ಬದ್ಧತೆಯಿಂದ ನಿರ್ವಹಿಸುವುದಾಗಿ ನೂತನ ಸಭಾಧ್ಯಕ್ಷ ಹಾಗೂ ರೋಣ ಕ್ಷೇತ್ರದ ಶಾಸಕ ಜಿ.ಎಸ್.ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿಯ ಸದ್ಗುರು ಶ್ರೀ ಯಲ್ಲಾಲಿಂಗೇಶ್ವರ ಶಾಖಾಮಠದಲ್ಲಿ ನಡೆದ ಅಭಿನಂದನಾ ಹಾಗೂ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಭಾಧ್ಯಕ್ಷನಾಗಿ ಸದನದಲ್ಲಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿ, ಸದನದ ಘನತೆ ಹಾಗೂ ಸಂಸದೀಯ ಪರಂಪರೆಯನ್ನು ಕಾಪಾಡಲು ಪ್ರಾಮಾಣಿಕವಾಗಿ ಪ್ರಯತ್ನಿಸುವೆ. ಸಾರ್ವಜನಿಕ ಜೀವನದಲ್ಲಿ ಸಾಧು-ಸಂತರ ಆಶೀರ್ವಾದ ಮತ್ತು ಹಿರಿಯರ ಮಾರ್ಗದರ್ಶನ ಸದಾ ತಮ್ಮೊಂದಿಗೆ ಇದ್ದು, ಅದು ಮತ್ತಷ್ಟು ಜವಾಬ್ದಾರಿಯಿಂದ ಸೇವೆ ಸಲ್ಲಿಸಲು ಪ್ರೇರಣೆ ನೀಡುತ್ತದೆ ಎಂದರು.

ಸಮಾಜದಲ್ಲಿ ಶಾಂತಿ, ಸಾಮರಸ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಸಾಧು-ಸಂತರ ಪಾತ್ರ ಮಹತ್ವದ್ದಾಗಿದೆ. ಮಠಾಧೀಶರು ಹಾಗೂ ಶರಣರ ವಿಚಾರಧಾರೆಗಳು ಸಮಾಜಕ್ಕೆ ಸದಾ ದಾರಿದೀಪವಾಗಿದ್ದು, ಅವರ ಆಶೀರ್ವಾದ ಸಾರ್ವಜನಿಕ ಸೇವೆಗೆ ಮತ್ತಷ್ಟು ಬಲ ನೀಡುತ್ತದೆ ಎಂದು ಹೇಳಿದರು.

**ಪೂಜ್ಯರ ಭವಿಷ್ಯವಾಣಿ ಸಾಕಾರ:** ಶ್ರೀಮಠದ ಬಸವರಾಜ ಶರಣರು ಮಾತನಾಡಿ, ಹಿಂದೆ ಶ್ರೀಮಠಕ್ಕೆ ಆಗಮಿಸಿದ್ದ ಮುಗಳಖೋಡದ ಪೂಜ್ಯರು ರೋಣ ಶಾಸಕ ಜಿ.ಎಸ್.ಪಾಟೀಲ ಅವರು ಅತ್ಯಂತ ಉನ್ನತ ಸ್ಥಾನಕ್ಕೆ ಏರುತ್ತಾರೆ ಎಂದು ಭವಿಷ್ಯ ನುಡಿದಿದ್ದರು. ಪಾಟೀಲರು ಸಚಿವ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿಯಾಗಿದ್ದರೂ, ಸದ್ಗುರುವಿನ ಸಂಕಲ್ಪವೇ




ಬೇರೆ ಇದೆ ಎಂದು ಪೂಜ್ಯರು ಆಗಲೇ ಹೇಳಿದ್ದರು. ಅದರಂತೆಯೇ ಪಾಟೀಲರು ವಿಧಾನಸಭೆಯ ಸಭಾಧ್ಯಕ್ಷರಾಗಿ ಶ್ರೀಮಠಕ್ಕೆ ಆಗಮಿಸಿ ಪೂಜ್ಯರ ಸಮ್ಮುಖದಲ್ಲಿ ಸನ್ಮಾನ ಸ್ವೀಕರಿಸುತ್ತಿರುವುದು ಸಂತಸ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಅಬ್ಬಿಗೇರಿಯ ಸದ್ಗುರು ಶ್ರೀ ಯಲ್ಲಾಲಿಂಗೇಶ್ವರ ಮಠದ ಬಸವರಾಜ ಸ್ವಾಮೀಜಿ, ಇಟಗಿಯ ಶಿವಶರಣ ಗದಿಗೆಪ್ಪಜ್ಜನವರು, ಗಜೇಂದ್ರಗಡದ ಚಂದ್ರಶೇಖರಯ್ಯ ಸ್ವಾಮೀಜಿ, ಸವಡಿಯ ಸ್ವಾಮೀಜಿ, ಮರುಳಸಿದ್ದೇಶ್ವರ ಸ್ವಾಮೀಜಿ, ಹೊಳೆಆಲೂರಿನ ಯಚ್ಚರೇಶ್ವರ ಸ್ವಾಮೀಜಿ, ಗುಳಗುಳಿಯ ಋಷಿಕುಮಾರ ಸ್ವಾಮೀಜಿ, ಚಿಕ್ಕವಂತಿ-ಮೊಳಕಾಲ್ಮೂರಿನ ಶಿವಮೂರ್ತಿ ಸ್ವಾಮೀಜಿ, ಬಿಸರಹಳ್ಳಿಯ ಮಳೆಯ್ಯಯ್ಯ ಸ್ವಾಮೀಜಿ, ಆನಂದಯ್ಯ ಸ್ವಾಮೀಜಿ, ಸವಡಿ ಚಂದ್ರಶೇಖರಯ್ಯ ಸ್ವಾಮೀಜಿ, ಲಕ್ಕುಂಡಿಯ ಹುಚ್ಚಯ್ಯ ಸ್ವಾಮೀಜಿ, ಅಸೂಟಿ ಆಶ್ರಮದ ಶರೀಫ್ ಸ್ವಾಮೀಜಿ, ಹಿರೇಸಿಂಧೋಗಿಯ ಮರುಳಸಿದ್ದಯ್ಯ ಸ್ವಾಮೀಜಿಗಳು ಹಾಗೂ ನಾಗರಾಜಯ್ಯ ಸ್ವಾಮೀಜಿಗಳು ಸೇರಿದಂತೆ ವಿವಿಧ ಮಠಗಳ ಪೂಜ್ಯರು ಉಪಸ್ಥಿತರಿದ್ದು ಜಿ.ಎಸ್.ಪಾಟೀಲ ಅವರನ್ನು ಆಶೀರ್ವದಿಸಿದರು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ವಿಧಾನಸಭೆಯ ನೂತನ ಸಭಾಧ್ಯಕ್ಷ ಜಿ.ಎಸ್.ಪಾಟೀಲ ಅವರನ್ನು ಸನ್ಮಾನಿಸಲಾಯಿತು. ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಜಿ.ಬಿ.ಪಾಟೀಲ, ಕಿಶೋರ್ ನಾಗರಕಟ್ಟಿ, ಸಿ.ಕೆ.ಹೆಚ್. ಕಡಣಿಶಾಸ್ತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ್ ಜಿ.ಪಾಟೀಲ, ಅಕ್ಷಯ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಗದಿಗೆಪ್ಪ ಕಿರೇಸೂರ, ಸಂಜಯ ದೊಡಮನಿ ಸೇರಿದಂತೆ ಅನೇಕ ಮುಖಂಡರು ಹಾಗೂ ಭಕ್ತರು ಪಾಲ್ಗೊಂಡಿದ್ದರು.

## ಜಗದ್ಗುರು ರೇಣುಕಾಚಾರ್ಯರ ನೂತನ ಮಹಾರಥೋತ್ಸವದ ಲೋಕಾರ್ಪಣೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ:**
ಸಮೀಪದ ಅಬ್ಬಿಗೇರಿ ಹಿರೇಮಠದ ನೂತನ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಹಾರಥೋತ್ಸವದ ಲೋಕರ್ಪಣೆ ಹಾಗೂ ಲಿಂ. ಸೋಮಶೇಖರ ಶಿವಾಚಾರ್ಯರ 6ನೇ ವರ್ಷದ ಪುಣ್ಯಸ್ಮರಣೋತ್ಸವದ ಅಂಗವಾಗಿ ಜನಜಾಗೃತಿ ಧರ್ಮ ಸಮಾರಂಭ ಅ.3ರಂದು



**ಅಬ್ಬಿಗೇರಿಯಲ್ಲಿ ಇಂದು ಜನಜಾಗೃತಿ ಧರ್ಮ ಸಮಾರಂಭ**

ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಅ.3ರಂದು ಬೆಳಗ್ಗೆ 5 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂರ್ತಿ ಸೇರಿದಂತೆ ವಿವಿಧ ಶ್ರೀಗಳ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ನಡೆಯಲಿದೆ. ಮಹೇಶ್ವರ ವಟುಗಳಿಗೆ ಅಯ್ಯಾಚಾರ ಹಾಗೂ ಲಿಂಗದೀಕ್ಷೆ ಕಾರ್ಯಕ್ರಮ ಜರುಗಲಿದೆ.

ಬೆಳಗ್ಗೆ 8 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಚಂದ್ರಶೇಖರ ಶಿವಾಚಾರ್ಯರ ಉತ್ಸವ ಮೂರ್ತಿಗಳೊಂದಿಗೆ ನೂತನ ರಥದ ಕಳಸ ಹಾಗೂ ರಥದ ಹಗ್ಗದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ.

ಬೆಳಗ್ಗೆ 11 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ನೂತನ ಮಹಾರಥೋತ್ಸವದ ಲೋಕರ್ಪಣೆ ಹಾಗೂ ಜನಜಾಗೃತಿ ಧರ್ಮಸಭೆ ನಡೆಯಲಿದೆ. ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿದ್ದಾರೆ. ಮುಕ್ತಿಮಂದಿರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಸೂಡಿ ಜುಕ್ತಿಹಿರೇಮಠದ ಡಾ. ಕೋಟೂರು ಬಸವೇಶ್ವರ ಶಿವಾಚಾರ್ಯರು, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಜಕ್ಕಲಿ-ಹಾರನಹಳ್ಳಿ ಹಿರೇಮಠದ ವಿಶ್ವಾರಾಧ್ಯ ಶಿವಾಚಾರ್ಯರು, ಚಳಗೇರಿ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯರು, ಹಾಸನ ಜವೇನಹಳ್ಳಿ ಮಠದ ಸಂಗಮೇಶ್ವರ ಸ್ವಾಮೀಜಿ, ಯಲಬುರ್ಗಾ ಹಿರೇಮಠದ ಬಸವಲಿಂಗ ಶಿವಾಚಾರ್ಯರು, ಸಂಗೊಳ್ಳಿ ಸಂಸ್ಥಾನ ಹಿರೇಮಠದ ಗುರುಲಿಂಗ ಶಿವಾಚಾರ್ಯರು ಹಾಗೂ ಅಬ್ಬಿಗೇರಿ ಯಲ್ಲಾಲಿಂಗೇಶ್ವರ ಮಠದ ಡಾ. ಬಸವರಾಜ ಶರಣರು ಸಮ್ಮುಖ ವಹಿಸಲಿದ್ದಾರೆ.

ಸಿದ್ದರಬೆಟ್ಟ-ಅಬ್ಬಿಗೇರಿ ಹಿರೇಮಠದ ವೀರಭದ್ರ ಶಿವಾಚಾರ್ಯರು ನುಡಿನಮನ ಸಲ್ಲಿಸಲಿದ್ದಾರೆ. ಜಿ.ಎಸ್. ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕಳಕಪ್ಪ ಬಂಡಿ ಸೇರಿದಂತೆ ಹಲವು ಗಣ್ಯರು ಆಗಮಿಸಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



**ಢವಳಗಿ ಗ್ರಾಮದ ಬಸವ ಬಾಲ ಭಾರತಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿರವರ ಜನ್ಮದಿನಾಚರಣೆಯ ಅಂಗವಾಗಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಗಾಂಧಿ ಜಯಂತಿಯನ್ನು ಆಚರಿಸಲಾಯಿತು. ಶಾಲೆಯ ಮುಖ್ಯ ಗುರುಗಳಾದ ರಮೇಶ ಮೂಲಿಮನಿ ಹಾಗೂ ಶಿಕ್ಷಕರುಗಳಾದ ಜೆ.ಎಸ್. ಪಾಟೀಲ್, ಎಸ್.ಬಿ ಬಿರಾದಾರ, ಎಸ್.ಎಸ್. ಅವಟಿ, ಹರಿನಾಥ್.ಎನ್ ಮತ್ತು ಶಾಲೆಯ ವಿದ್ಯಾರ್ಥಿಗಳು ಹಾಜರಿದ್ದರು. ಶಾಲಾ ವಿದ್ಯಾರ್ಥಿಯಾದ ಬ್ರಹ್ಮಪುತ್ರ ಪತ್ತಾರ ಅವರು ಗಾಂಧೀಜಿ ರವರ ಕುರಿತು ಮಾತನಾಡಿದರು. ಮಹಾತ್ಮ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ರವರ ಜೀವನ ಚರಿತ್ರೆಯನ್ನು ಕುರಿತು ಮುಖ್ಯ ಗುರುಗಳಾದ ರಮೇಶ ಮೂಲಿಮನಿ ರವರು ಮಾತನಾಡಿದರು. ಹರಿನಾಥ್ ಎನ್ ಶಿಕ್ಷಕರು ವಂದಿಸಿದರು.**

## ರಾಜ್ಯಮಟ್ಟದ ಭೋವಿ ವಧು-ವರರ ಸಮಾವೇಶ ಅ.4ರಂದು

**ಸತ್ಯಮಿಥ್ಯ ಸುದ್ದಿಮೂಲ ನವಲಗುಂದ:**
ಅಖಿಲ ಕರ್ನಾಟಕ ಭೋವಿ ಸಮಾಜ ವಿವಿಧೋದ್ದೇಶ ಕಲ್ಯಾಣ ಸಂಘ (ರಿ.), ಕಲಬುರಗಿ-ಬೆಂಗಳೂರು ಇವರ ನೇತೃತ್ವದಲ್ಲಿ ಹಾಗೂ ನವಲಗುಂದ ತಾಲೂಕು ಘಟಕದ ವತಿಯಿಂದ ನೈಜ ಭೋವಿ ಸಮಾಜದ ರಾಜ್ಯಮಟ್ಟದ ವಧು-ವರರ ಸಮಾವೇಶ ಹಾಗೂ ಸಂಘದ ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಹುಚ್ಚಪ್ಪ ಭೋವಿ ಮತ್ತು ರಾಜ್ಯಮಟ್ಟದ ನೂತನ ಪದಾಧಿಕಾರಿಗಳ ಸತ್ಕಾರ ಸಮಾರಂಭ ಅ.4ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಶ್ರೀ ಅಜಾತ ನಾಗಲಿಂಗಸ್ವಾಮಿ ಮಠದ ಆವರಣದಲ್ಲಿರುವ ಶ್ರೀ ನಾಗಲಿಂಗ ಭವನದಲ್ಲಿ ನಡೆಯಲಿದೆ.

ಶ್ರೀ ಇಮ್ಮಡಿ ಸಿದ್ದೇಶ್ವರ ಶಿವಾಚಾರ್ಯರು ಹಾಗೂ ನಾಗಲಿಂಗಸ್ವಾಮಿ ಮಠದ ಶ್ರೀ ವೀರಯ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಶಾಸಕ ಎನ್.ಎಚ್. ಕೋನರಡ್ಡಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮಾಜಿ ಸಚಿವ ಶಂಕರ ಪಾಟೀಲ ಮುನೇನಕೊಪ್ಪ, ಕೆ.ಎನ್. ಗಡ್ಡಿ, ಯುವ ಮುಖಂಡರಾದ ವಿನೋದ ಅಸೂಟಿ, ದೇವರಾಜ ದಾಡಿಭಾವಿ ಸೇರಿದಂತೆ ಭೋವಿ ಸಮಾಜದ ಮುಖಂಡರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಇಟಗಿ ಗ್ರಾಮದ ನೈಜ ಮೂಲ ಭೋವಿ ಪಲ್ಲಕ್ಕಿ ಬಳಗದವರು ಕಾರ್ಯಕ್ರಮಕ್ಕೆ ಶುಭಕೋರಿದ್ದಾರೆ.

ಸಮಾಜದ ವಧು-ವರರು ಹಾಗೂ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾವೇಶದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಕ್ಕಲಿಯಲ್ಲೇ ಗಾಂಧಿ ಸ್ತಂಭ ನಿರ್ಮಿಸಲಿ

## ಗಾಂಧೀಜಿ ಭೇಟಿ ನೀಡಿದ ಐತಿಹಾಸಿಕ ಗ್ರಾಮಕ್ಕೆ ಆದ್ಯತೆ ನೀಡುವಂತೆ ಸ್ಥಳೀಯರ ಆಗ್ರಹ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಮಹಾತ್ಮ ಗಾಂಧೀಜಿ ಅವರು 1934ರಲ್ಲಿ ಭೇಟಿ ನೀಡಿದ ಐತಿಹಾಸಿಕ ಜಕ್ಕಲಿ ಗ್ರಾಮದಲ್ಲಿಯೇ ಸರ್ಕಾರ ಗಾಂಧಿ ಸ್ತಂಭ ನಿರ್ಮಿಸಬೇಕು ಎಂಬ ಬೇಡಿಕೆ ಸ್ಥಳೀಯರಿಂದ ವ್ಯಕ್ತವಾಗಿದೆ.

ಗಾಂಧೀಜಿ ಭೇಟಿ ನೀಡಿದ ಸ್ಥಳಗಳಲ್ಲಿ ಅವರ ಸ್ಮರಣೆಯನ್ನು ಶಾಶ್ವತಗೊಳಿಸುವ ಉದ್ದೇಶದಿಂದ ಸರ್ಕಾರ ಗಾಂಧಿ ಸ್ತಂಭ ನಿರ್ಮಾಣಕ್ಕೆ ಮುಂದಾಗಿರುವುದು ಸ್ವಾಗತಾರ್ಹ. ಆದರೆ, ಬಾಪು ಅವರ ಹೆಜ್ಜೆ ಗುರುತು ಮೂಡಿರುವ ಜಕ್ಕಲಿ ಗ್ರಾಮಕ್ಕೆ ಈ ಯೋಜನೆಯಲ್ಲಿ ಆದ್ಯತೆ ನೀಡಬೇಕು ಎಂಬುದು ಗ್ರಾಮಸ್ಥರ ಆಶಯವಾಗಿದೆ.

1934ರ ಮಾರ್ಚ್ 3ರಂದು ಮಹಾತ್ಮ ಗಾಂಧೀಜಿ ಜಕ್ಕಲಿ ಗ್ರಾಮಕ್ಕೆ ಆಗಮಿಸಿ, ಗ್ರಾಮಸ್ಥರನ್ನುದ್ದೇಶಿಸಿ ಮಾತನಾಡಿದ್ದರು. ಅಂದು ಸುತ್ತಮುತ್ತಲಿನ ಗ್ರಾಮಗಳಿಂದಲೂ ಅಪಾರ ಸಂಖ್ಯೆಯಲ್ಲಿ ಜನರು ಜಕ್ಕಲಿಗೆ ಆಗಮಿಸಿ ಬಾಪು ಅವರ ದರ್ಶನ ಹಾಗೂ ಸಂದೇಶವನ್ನು ಆಲಿಸಿದ್ದರು ಎಂಬುದು ಸ್ಥಳೀಯ ಇತಿಹಾಸದಲ್ಲಿ ದಾಖಲಾಗಿದೆ. ಹೀಗಾಗಿ, ಸ್ವಾತಂತ್ರ್ಯ ಹೋರಾಟದ



"ಗಾಂಧೀಜಿ ಹೆಜ್ಜೆ ಇಟ್ಟ ಜಕ್ಕಲಿಯಲ್ಲಿಯೇ ಅವರ ಸ್ಮರಣಾರ್ಥ ಗಾಂಧಿ ಸ್ತಂಭ ನಿರ್ಮಾಣವಾಗಬೇಕು. ಇದು ಕೇವಲ ಸ್ಮಾರಕ ನಿರ್ಮಾಣವಲ್ಲ; ಬಾಪು ಅವರೊಂದಿಗೆ ಜಕ್ಕಲಿಗಿರುವ ಐತಿಹಾಸಿಕ ನಂಟನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಿದೆ. ಸರ್ಕಾರ ಜಕ್ಕಲಿಯ ಐತಿಹಾಸಿಕ ಮಹತ್ವವನ್ನು ಪರಿಗಣಿಸಿ ಸ್ತಂಭ ನಿರ್ಮಾಣಕ್ಕೆ ಆದ್ಯತೆ ನೀಡಬೇಕು."
। ನ್ಯಾಯವಾದಿ ರವೀಂದ್ರನಾಥ ದೊಡ್ಡಮೇಟಿ

ನೆನಪುಗಳನ್ನು ತನ್ನೊಳಗೆ ಹೊತ್ತಿರುವ ಜಕ್ಕಲಿಯಲ್ಲಿ ಸ್ಮಾರಕ ನಿರ್ಮಾಣವಾದರೆ, ಅದು ಮುಂದಿನ ಪೀಳಿಗೆಗೆ ಇತಿಹಾಸದ ಜೀವಂತ ನೆನಪಾಗಿ ಉಳಿಯಲಿದೆ.

ಗಾಂಧೀಜಿ ಜಕ್ಕಲಿಗೆ ಆಗಮಿಸಿದ ದಿನದ ಹಿನ್ನೆಲೆ, ಅಂದಿನ ಜನಸಂದಣಿ, ಅವರ ಸಂದೇಶ ಹಾಗೂ ಸ್ವಾತಂತ್ರ್ಯ ಚಳವಳಿಯೊಂದಿಗಿನ ಗ್ರಾಮದ ನಂಟನ್ನು ಪರಿಚಯಿಸುವ ಮಾಹಿತಿ ಫಲಕಗಳನ್ನು ಅಳವಡಿಸಬೇಕು. ಸ್ತಂಭದ ಸುತ್ತಲೂ ಉದ್ಯಾನ, ಕುಳಿತುಕೊಳ್ಳುವ ವ್ಯವಸ್ಥೆ ಹಾಗೂ ಸ್ಮರಣಾ ಸ್ಥಳವನ್ನು ಅಭಿವೃದ್ಧಿಪಡಿಸಿದರೆ, ಜಕ್ಕಲಿಯ ಐತಿಹಾಸಿಕ ಮಹತ್ವ ಮತ್ತಷ್ಟು ಎದ್ದು ಕಾಣಲಿದೆ. ಇದರಿಂದ ವಿದ್ಯಾರ್ಥಿಗಳು, ಸಂಶೋಧಕರು ಹಾಗೂ ಪ್ರವಾಸಿಗರಿಗೆ ಗಾಂಧೀಜಿ ಅವರ ಗ್ರಾಮ ಭೇಟಿ ಕುರಿತು ತಿಳಿದುಕೊಳ್ಳಲು ಅನುಕೂಲವಾಗಲಿದೆ.

'ಗಾಂಧೀಜಿ ಹೆಜ್ಜೆ ಇಟ್ಟ ನೆಲವೇ ಗಾಂಧಿ ಸ್ತಂಭಕ್ಕೆ ಸೂಕ್ತ ನೆಲ' ಎಂಬ ಆಶಯದೊಂದಿಗೆ ಸರ್ಕಾರ ಜಕ್ಕಲಿಯನ್ನು ಪರಿಗಣಿಸಿ, ಸ್ಮಾರಕ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ದೈಹಿಕ -ಮಾನಸಿಕ ಸದೃಢತೆಗೆ ಕ್ರೀಡೆ ಅವಶ್ಯಕ: ಎಮ್.ಎಸ್. ಬಡದಾನಿ

**ಸತ್ಯಮಿಥ್ಯ ಸುದ್ದಿಮೂಲ ಮುದ್ದೇಬಿಹಾಳ:**
ಕ್ರೀಡೆಗಳು ಮಕ್ಕಳ ಮಾನಸಿಕ ಹಾಗೂ ದೈಹಿಕ ವಿಕಾಸದೊಂದಿಗೆ ನಾವಿನ್ಯ ಕಲಿಕೆ ಹಾಗೂ ಅವಧಾನವನ್ನು ಹೆಚ್ಚಿಸಲು ಸಹಕಾರಿಯಾಗಿವೆ ಗ್ರಾಮೀಣ ಭಾಗದಲ್ಲಿ ಇಂತಹ ಕ್ರೀಡಾಕೂಟಗಳನ್ನು ಆಯೋಜನೆ ಮಾಡಿ ಸಂಪೂರ್ಣ ಸಹಕಾರ ನೀಡಿರುವ ಸಂಸ್ಥೆಯ ಕಾರ್ಯ ಮೆಚ್ಚುವಂತದ್ದು ಎಂದು ಎಮ್ ಎಸ್ ಬಡದಾನಿ ಯವರು ನುಡಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಮುದ್ದೇಬಿಹಾಳ ಹಾಗೂ ವೀರೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆ ಇವರ ಸಂಯುಕ್ತ ಆಶ್ರಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಟೇಬಲ್ ಟೆನಿಸ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಮುತ್ತು ಅಂಗಡಿ ಮಾತನಾಡಿ.ಪ್ರತಿಯೊಬ್ಬ ವಿದ್ಯಾರ್ಥಿ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಅಭ್ಯಾಸದ ಜೊತೆ ನಿಮ್ಮ ಅಂಕಗಳಿಕೆಯು ಹೆಚ್ಚಾಗುತ್ತದೆ ನೀವು ಮುಂದೆ ರಾಜ್ಯ ಹಾಗೂ ರಾಷ್ಟ್ರ ಮಟ್ಟವನ್ನು ಪ್ರತಿನಿದಿಸುವ ಹೆಮ್ಮೆಯ ಸಾಧಕರಾಗಿ ಹೊರಹೊಮ್ಮಿ ಎಂದರು.

ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ಎಮ್ ಎಮ್ ಬೆಳಗಲ್ಲ ಅವರು ಮಾತನಾಡಿದರು.ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಟೇಬಲ್ ಟೆನಿಸ್ ಆಟಗಾರರಾದ ಸಂಜು ಹಜೇರಿ ಸೇರಿದಂತೆ ಎಲ್ಲ ಅತಿಥಿಗಳನ್ನು ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕೋಶಾಧ್ಯಕ್ಷರಾದ ಬಿ ಎಮ್ ತಾಳಿಕೋಟಿ, ಉಚಿತ ಪ್ರಸಾದ ನಿಲಯದ ಚೆರಮನ್ನರಾದ ಎ ಜಿ ಗಂಗನಗೌಡರ, ನಿರ್ದೇಶಕರಾದ



ಬಿ ಎಸ್ ಪಾಟೀಲ್, ಬಿ ಎಸ್ ಮೇಗಲಮನಿ,ತಾಲೂಕ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷರಾದ ಬಿ.ಎಚ್. ಮುದನೂರ, ತಾಲೂಕ ದೈಹಿಕ ಶಿಕ್ಷಣ ಅಧಿಕಾರಿಗಳಾದ ಎಸ್.ಬಿ.ಕುಂಬಾರ,ಸಿ ಆರ್ ಪಿ ಬಸವರಾಜ ಮಾದರ ಮುಖ್ಯಗುರುಗಳಾದ ಎಲ್.ಎಚ್.ಫಿರಂಗಿ, ಬಿ.ಎಸ್. ಹೊಸಗೌಡರ,ಜಿ.ಎ.ಜಾವಳಗೇರಿ, ಶೇಖರ ನಾಯಕ, ಎ.ಜಿ.ದಖನಿ,ಕ್ರೀಡಾ ಉಸ್ತುವಾರಿ ದೈಹಿಕ ಶಿಕ್ಷಕರಾದ ವೀರೇಶ ಗದಗ, ವೀರೇಶ ಲೋಟಗೇರಿ, ಮಂಜುನಾಥ ಸಜ್ಜನ, ಸಂದೀಪ ಪಾಟೀಲ್,ಸುನಿಲ ಪಾಟೀಲ, ಚಿತ್ರಾ ಕುಪ್ಪಸ್ತ ಪ್ರಾರ್ಥಿಸಿದರು, ಸಂಜು ಹಜೇರಿ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು,ರಾಜು ಹಾದಿಮನಿ ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿದರು.

## ಸೇವೆಗೆ ಸನ್ಮಾನ- ಸಂಘಟನೆಯ ಒಗ್ಗಟ್ಟಿಗೆ ಹೊಸ ಬಲ!

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ನಗರದ ಖಾನತೋಟ ಗಜಾನನ ಯುವಕ ಮಂಡಳಿಯ ವತಿಯಿಂದ 2025ನೇ ಸಾಲಿನಲ್ಲಿ ಮಂಡಳಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಹಾಗೂ ಪ್ರಸಕ್ತ ಸಾಲಿನ ಗೌರವ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಮಹೇಶ ಭರಡಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಮಂಡಳಿಯ ವತಿಯಿಂದ ನಿನ್ನೆ ಆಯೋಜಿಸಿದ್ದ ಸಂಗೀತ ಸಂಜೆ ಕಾರ್ಯಕ್ರಮದ ಸಂದರ್ಭದಲ್ಲಿ ಈ ಗೌರವ ಸಮಾರಂಭ ಜರುಗಿತು. ಕಳೆದ ಸಾಲಿನಲ್ಲಿ ಮಂಡಳಿಯ ಅಧ್ಯಕ್ಷರಾಗಿ ಸಲ್ಲಿಸಿದ ಸೇವೆ, ಸಹಕಾರ ಹಾಗೂ ಸಂಘಟನೆಯ ಚಟುವಟಿಕೆಗಳಿಗೆ ನೀಡಿದ ಕೊಡುಗೆಯನ್ನು ಸ್ಮರಿಸಿ, ಪ್ರಸಕ್ತ ಸಾಲಿನ ಪದಾಧಿಕಾರಿಗಳು, ಓಣಿಯ ಗುರು-ಹಿರಿಯರು ಹಾಗೂ ಮುಖಂಡರ ಸಮ್ಮುಖದಲ್ಲಿ ಮಹೇಶ ಭರಡಿ ಅವರನ್ನು ಗೌರವಿಸಲಾಯಿತು. ಸಂಘಟನೆಯ ಚಟುವಟಿಕೆಗಳಿಗೆ ಹಿರಿಯರ ಮಾರ್ಗದರ್ಶನ ಹಾಗೂ ಪದಾಧಿಕಾರಿಗಳ ಒಗ್ಗಟ್ಟು ಮತ್ತಷ್ಟು ಬಲ ತುಂಬಲಿ ಎಂಬ ಆಶಯ ಈ ಸಂದರ್ಭದಲ್ಲಿ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಪ್ರಸಕ್ತ ಸಾಲಿನ ಪದಾಧಿಕಾರಿಗಳು, ಓಣಿಯ ಗುರು-ಹಿರಿಯರು, ಮುಖಂಡರು ಹಾಗೂ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.



# ಪುರಸಭೆ ಮುಖ್ಯಾಧಿಕಾರಿ ಗದ್ದಿಗೌಡರಗೆ ರಾಷ್ಟ್ರೀಯ ಸಮಾಜ ಸೇವಾ ರತ್ನ ಪ್ರಶಸ್ತಿ

**ಸತ್ಯಮಿಥ್ಯ ಅಣ್ಣಿಗೇರಿ:**
ಶ್ರೀನಿಧಿ ಫೌಂಡೇಶನ್ (ರಿ.), ಕರ್ನಾಟಕ ಹಾಗೂ ಪ್ರತಿಫಲ ಫೌಂಡೇಶನ್ (ರಿ.), ಧಾರವಾಡ ಇವರ ಸಂಯೋಗದಲ್ಲಿ ಆಯೋಜಿಸಿರುವ ಕನ್ನಡ ಸಾಂಸ್ಕೃತಿಕ ಸಮ್ಮೇಳನ ಗೋವಾ– 2026ರ ಅಂಗವಾಗಿ ನಡೆಯಲಿರುವ ರಾಷ್ಟ್ರಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅಣ್ಣಿಗೇರಿ ಪುರಸಭೆಯ ಮುಖ್ಯಾಧಿಕಾರಿ ವಾಯ್.ಜಿ. ಗದ್ದಿಗೌಡರ ಅವರಿಗೆ ರಾಷ್ಟ್ರೀಯ ಸಮಾಜ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಸಮಾಜ ಸೇವೆ ಹಾಗೂ ಸಾರ್ವಜನಿಕ ಆಡಳಿತ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ವಾಯ್.ಜಿ. ಗದ್ದಿಗೌಡರ ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಕನ್ನಡ ನಾಡು, ನುಡಿ, ಸಂಸ್ಕೃತಿ ಹಾಗೂ ಸಾಮಾಜಿಕ ಸೇವೆಯ ಕ್ಷೇತ್ರದಲ್ಲಿ ಸಾಧನೆಗೈದ ಗಣ್ಯರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಕನ್ನಡ ಸಾಂಸ್ಕೃತಿಕ ಸಮ್ಮೇಳನ–2026 ಹಾಗೂ ರಾಷ್ಟ್ರಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿದೆ. ವಾಯ್.ಜಿ. ಗದ್ದಿಗೌಡರ ಅವರಿಗೆ ರಾಷ್ಟ್ರೀಯ ಸಮಾಜ ಸೇವಾ ರತ್ನ ಪ್ರಶಸ್ತಿ ಲಭಿಸಿರುವುದಕ್ಕೆ ಅಣ್ಣಿಗೇರಿಯ ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು, ಹಾಗೂ ಸರ್ವ ಸದಸ್ಯರು, ಪುರಸಭೆಯ ಅಧಿಕಾರಿಗಳು, ಸರ್ವ ಸಿಬ್ಬಂದಿಗಳು ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಗಣ್ಯರು ಹಾಗೂ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದಾರೆ.



# ಗಾಂಧಿ ಜಯಂತಿ ಪ್ರಯುಕ್ತ "ಸ್ವಚ್ಛ ಸಂಗಮ – ನಮ್ಮ ಸಂಕಲ್ಪ" ಸ್ವಚ್ಛತಾ ಅಭಿಯಾನ

## ಅಫಜಲಪುರ ತಾಲ್ಲೂಕಿನ ದೇವಲ ಗಾಣಗಾಪುರ ಸಂಗಮದಲ್ಲಿ ಯಶಸ್ವಿಯಾಗಿ ಜರುಗಿದ ಕಾರ್ಯಕ್ರಮ

**ಸತ್ಯಮಿಥ್ಯ ಸುದ್ದಿಮೂಲ ಅಫಜಲಪುರ:**
ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಜನ್ಮದಿನವಾದ ಗಾಂಧಿ ಜಯಂತಿಯ ಪವಿತ್ರ ದಿನದಂದು, ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಹಾಗೂ ಐತಿಹಾಸಿಕ ಕ್ಷೇತ್ರವಾದ ದೇವಲ ಗಾಣಗಾಪುರ ಗ್ರಾಮದ ಭೀಮಾ–ಅಮರಜಾ ನದಿಗಳ ಸಂಗಮ ಸ್ಥಳದಲ್ಲಿ "ಸ್ವಚ್ಛ ಸಂಗಮ – ನಮ್ಮ ಸಂಕಲ್ಪ" ವತಿಯಿಂದ ಬೃಹತ್ ಸ್ವಚ್ಛತಾ ಕಾರ್ಯಕ್ರಮವು ಅತ್ಯಂತ ಅರ್ಥಪೂರ್ಣವಾಗಿ ಜರುಗಿತು.

ದಿತ್ ಸತ್ಸಂಗ್ ಫೌಂಡೇಶನ್, ಮೈ ಟ್ರೀ ಹಾಗೂ ಭೂಮಿ ಸಂಸ್ಥೆಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಈ ಕಾರ್ಯಕ್ರಮದಲ್ಲಿ, "ನನ್ನ ಭೂಮಿ, ನನ್ನ ಮರ, ನನ್ನ ನದಿ; ಇದೊಂದು ಕೇವಲ ಭೌತಿಕ ಯೋಜನೆಯಲ್ಲ, ಇದೊಂದು ಆಧ್ಯಾತ್ಮಿಕ ಸೇವೆ"ಎಂಬ ಆಧ್ಯಾತ್ಮಿಕ ಗುರುಗಳಾದ ಶ್ರೀ ಎಂ ಅವರ ಆಳವಾದ ಸಂದೇಶದಂತೆ ಪ್ರಕೃತಿ ಹಾಗೂ ನದಿಗಳ ಸಂರಕ್ಷಣೆಯ ಮಹತ್ವವನ್ನು ಸಾರಲಾಯಿತು.

ಕಾರ್ಯಕ್ರಮದ ಪ್ರಮುಖ ಗಣ್ಯರು ಹಾಗೂ ಅಧಿಕಾರಿಗಳ ಈ ಬೃಹತ್ ಸ್ವಚ್ಛತಾ ಅಭಿಯಾನಕ್ಕೆ ಜಿಲ್ಲಾ ಹಾಗೂ ಸ್ಥಳೀಯ ಮಟ್ಟದ ಗಣ್ಯರು ಚಾಲನೆ ನೀಡಿ, ಸ್ವತಃ ತಾವೂ ಕೂಡ ಶ್ರಮದಾನ ಮಾಡುವ ಮೂಲಕ ಇತರೆ ಎಲ್ಲರಿಗೂ ಮಾದರಿಯಾದರು.

ಕಲಬುರಗಿ ಕಂದಾಯ ಉಪವಿಭಾಗದ ಆಯುಕ್ತರಾದ ರಿತಾಕಾ ವರ್ಮಾ ಅವರು ಕಾರ್ಯಕ್ರಮದ ನೇತೃತ್ವ ವಹಿಸಿ ಸ್ವಚ್ಛತೆಯ ಸಂದೇಶ ಸಾರಿದರು.

ತರಬೇತಿ ಕೇಂದ್ರದ ಜಿಲ್ಲಾ ಅಧಿಕಾರಿ ಶಿಖರ ಮೇಘಾ ಅವರು ಉಪಸ್ಥಿತರಿದ್ದು ಯುವಕರಿಗೆ ಮಾರ್ಗದರ್ಶನ ನೀಡಿದರು. ನಗ್ಮಾ ಸೋನು (ಎನ್ ಎಸ್ ಯು ಐ ಅಧಿಕಾರಿ) ಅವರು ಯುವ ಪಡೆಗೆ ಸ್ಫೂರ್ತಿ ತುಂಬಿದರು.

ಬಸವರಾಜ ಹಡಪದ. ಅವರು ತಮ್ಮ ಸಂಸ್ಥೆಯ ವಿದ್ಯಾರ್ಥಿಗಳೊಂದಿಗೆ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಈರಣ್ಣ ವಡಗೇರಿ ಹಾಗೂ ಸಿಬ್ಬಂದಿಯಾದ ಮೌಲಿಲ್ ಶೇಖ್. ಅವರು ದೇವಸ್ಥಾನದ ಆಡಳಿತ ಮಂಡಳಿಯ ಪರವಾಗಿ ಕಾರ್ಯಕ್ರಮದ ವ್ಯವಸ್ಥೆ ಮತ್ತು ಯಶಸ್ಸಿಗೆ ಪ್ರಮುಖ ಪಾತ್ರ ವಹಿಸಿದರು.

ಗಾಂಧಿ ಜಯಂತಿಯ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಈ ಶ್ರಮದಾನ ಅಭಿಯಾನದಲ್ಲಿ ಸಾರ್ವಜನಿಕರು ಮತ್ತು ಯುವ ಜನತೆ ಉತ್ಸಾಹದಿಂದ ಭಾಗವಹಿಸಿದರು.

ಯತಿರಾಜ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು.ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನದಿ ತೀರದ ಆವರಣವನ್ನು ಸ್ವಚ್ಛಗೊಳಿಸಿದರು. ದತ್ತಾತ್ರೇಯ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರು ಸಮುದಾಯದ ನಾಯಕತ್ವವನ್ನು ವಹಿಸಿ ಕೈಜೋಡಿಸಿದರು. ಎನ್ ಎಸ್ ಯು ಐ ಘಟಕದ ವಿದ್ಯಾರ್ಥಿಗಳು ಶ್ರಮದಾನದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಪರಿಸರ ಜಾಗೃತಿ ಮೂಡಿಸಿದರು.

ದೇವಲ ಗಾಣಗಾಪುರದ ಸಂಗಮ ಕ್ಷೇತ್ರದ ಪಾವಿತ್ರ್ಯತೆಯನ್ನು ಕಾಪಾಡುವ ನಿಟ್ಟಿನಲ್ಲಿ, ಪ್ಲಾಸ್ಟಿಕ್ ಮುಕ್ತ ಮತ್ತು ನಳನಳಿಸುವ ಪರಿಸರ ನಿರ್ಮಿಸಲು ಈ ಅಭಿಯಾನವು ಅತ್ಯಂತ ಸಹಕಾರಿಯಾಯಿತು. ಸ್ಥಳೀಯ ನದಿ ತೀರವನ್ನು ಸ್ವಚ್ಛಗೊಳಿಸುವುದರ ಜೊತೆಗೆ ನೆರೆದಿದ್ದ ನೂರಾರು ಜನರಿಗೆ ಪರಿಸರ ಸಂರಕ್ಷಣೆಯ ಗಾಂಧೀಜಿಯವರ ಕನಸಿನ ಕುರಿತು ಜಾಗೃತಿ ಮೂಡಿಸಲಾಯಿತು. ಈ ಕಾರ್ಯಕ್ರಮವು ಸ್ಥಳೀಯ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಯಿತು.



# ರಾಷ್ಟ್ರ ಮಟ್ಟದ ಮರುಭೂಮಿ ಟ್ರೆಕ್ಕಿಂಗ್‌ಗೆ ಮುದ್ದೇಬಿಹಾಳದ ಐದು ಜನ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಮುದ್ದೇಬಿಹಾಳ:**
ರಾಜಸ್ಥಾನ ರಾಜ್ಯದ ಬಿಕಾನೇರ್ ದಲ್ಲಿ ಸೆಪ್ಟೆಂಬರ್ 25 ರಿಂದ ಸೆಪ್ಟೆಂಬರ್ 29 ರವರೆಗೆ ನಡೆದ ರಾಷ್ಟ್ರ ಮಟ್ಟದ ಪರಿಸರ ಜಾಗೃತಿ ಮತ್ತು ಮರುಭೂಮಿ ಟ್ರೆಕ್ಕಿಂಗ್ ಕಾರ್ಯಕ್ರಮಕ್ಕೆ ಕರ್ನಾಟಕದಿಂದ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದ ಎಂ.ಜಿ.ವಿ.ಸಿ ಕಲಾ, ವಾಣಿಜ್ಯ ಮತ್ತು ಸೈನ್ಸ್ ಕಾಲೇಜಿನ ಸ್ಕೌಟ್ಸ್ ಮತ್ತು ಗೈಡ್ಸ್ ವಿಭಾಗದಿಂದ ಐದು ಜನ ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರು.

ಕಾಲೇಜಿನ ರೋವರ್ಸ್ ಮತ್ತು ರೇಂಜರ್ಸ್ ವಿಭಾಗದ ಲೀಡರ್ ಡಾ. ಪ್ರಕಾಶ್ ನರಗುಂದ, ರಂಜಾನಸಾಬ್ ಪಿಂಜಾರ್ ನಿಹಾಲ್ ನಾಯ್ಕೋಡಿ ರೇಂಜರ್ಸ್ ಸಮಿತಾ ನಾವಲಗಿ ಮತ್ತು ಅಕ್ಷತಾ ಪ್ಯಾಟಿ ಗೌಡರ್ ಕರ್ನಾಟಕ ರಾಜ್ಯದಿಂದ ಪ್ರತಿನಿಧಿಸಿದ್ದರು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನ ಕರ್ನಾಟಕ ರಾಜ್ಯ ಕಾರ್ಯದರ್ಶಿಗಳು ಇವರನ್ನು ಆಯ್ಕೆ ಮಾಡಿ ಕಳಿಸಿದ್ದರು. ಬಿಕಾನೇರ್‌ನಲ್ಲಿ ನಡೆದ ಕ್ಯಾಂಪ್‌ನಲ್ಲಿ ಇವರು ಪರಿಸರ ಜಾಗೃತಿ ಮತ್ತು ಮರುಭೂಮಿ ಟ್ರೆಕ್ಕಿಂಗ್‌ಗೆ ಸಂಬಂಧಿಸಿದ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿದ್ದರು. ಆಯ್ಕೆಯಾಗಿ ಮರಳಿ ಬಂದ ಡಾ. ಪ್ರಕಾಶ್ ನರಗುಂದ ಮತ್ತು ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರು, ಕಾರ್ಯದರ್ಶಿಗಳು, ಆಡಳಿತಾಧಿಕಾರಿಗಳು, ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದರು.







# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾಪೋಷಕದಿಂದ 'ವಿನಮ್ರ ಆರ್ಥಿಕ ನೆರವು

**ಸತ್ಯಮಿಥ್ಯ ಸುದ್ದಿಮೂಲ ಧಾರವಾಡ:**
ಇಲ್ಲಿನ ವಿದ್ಯಾಗಿರಿಯಲ್ಲಿರುವ ಜೆ.ಎಸ್.ಎಸ್ ಕಾಲೇಜಿನ ಆವರಣದಲ್ಲಿ ವಿದ್ಯಾಪೋಷಕ ಸಂಸ್ಥೆಯು 'ನರ್ಚರ್ ಮೆರಿಟ್' ಯೋಜನೆಯಡಿ ಆರ್ಥಿಕ ಸಂಕಷ್ಟದಲ್ಲಿರುವ ಅರ್ಹ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ 2026–27ನೇ ಶೈಕ್ಷಣಿಕ ಸಾಲಿನ "ವಿನಮ್ರ ಆರ್ಥಿಕ ನೆರವು" ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ 183 ವಿದ್ಯಾರ್ಥಿಗಳಿಗೆ 34.84 ಲಕ್ಷ ರೂ.ಗಳ ಆರ್ಥಿಕ ನೆರವನ್ನು ನೀಡಲಾಯಿತು. ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪ್ರೊ. ರಂಗನಾಥ ಆರ್. ಕುಲಕರ್ಣಿ, ವಿಜಯ್ ಬೇದ್ರೆ, ವಾಸುದೇವ್ ಮಯ್ಯ ಮತ್ತು ಡಾ. ಶರತ್ ಐರಾನಿ ಅವರು ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ನಂತರದ ಶಿಕ್ಷಣ ಮುಂದುವರಿಕೆಗೆ ಅನೇಕ ಮಕ್ಕಳಿಗೆ ವಿದ್ಯಾಪೋಷಕದಿಂದ ಅತ್ಯಂತ ಉಪಯುಕ್ತವಾಗಿದೆ. ಆರ್ಥಿಕ ಸಂಕಷ್ಟದಲ್ಲಿರುವವರು ಇದರ ಸದುಪಯೋಗ ಪಡೆದುಕೊಂಡು ಜೀವನದಲ್ಲಿ ಯಶಸ್ಸಿನ ಗುರಿ ಸೇರಬೇಕು ಹಾಗೂ ನಿಮ್ಮಂಥ ಸಾವಿರಾರು ವಿದ್ಯಾರ್ಥಿಗಳಿಗೆ ನೀವೂ ಮುಂದೆ ನೆರವಾಗಬೇಕು ಎಂದು ಅತಿಥಿಗಳು ಕರೆ ನೀಡಿದರು. ಅಲ್ಲದೆ, ವಿದ್ಯಾಪೋಷಕ ಸಂಸ್ಥೆ ಮಾಡುತ್ತಿರುವ ಕೆಲಸದ ಬಗ್ಗೆ ಅವರು ಸಂತೋಷ ವ್ಯಕ್ತಪಡಿಸಿದರು.

ಸಂಸ್ಥೆಯಿಂದ ಆರ್ಥಿಕ ನೆರವು ಪಡೆದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿ ಕು. ದಯಾನಂದ ಎಂ. ಮತ್ತು ಜ್ಯೋತಿ ಅಳಗವಾಡಿ ತಮ್ಮ ಅನಿಸಿಕೆ ಹಂಚಿಕೊಳ್ಳುತ್ತಾ, "ಗ್ರಾಮೀಣ ಪ್ರದೇಶದಿಂದ ಬಂದ ನಾನು, ಕುಟುಂಬದ ಆರ್ಥಿಕ ಸಮಸ್ಯೆಯಿಂದ ನನ್ನ ಶೈಕ್ಷಣಿಕ ಜೀವನ ಇಲ್ಲಿಗೆ ಮುಕ್ತಾಯವಾಗಿತ್ತು ಎಂದು ತಿಳಿದುಕೊಂಡಿದ್ದೆ. ಆದರೆ ಸಂಸ್ಥೆಯಿಂದ ನನ್ನ ಶೈಕ್ಷಣಿಕ ಜೀವನ ಇಂದು ಮುಂದುವರೆಯಲು ಸಾಧ್ಯವಾಗಿದೆ" ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ವಿದ್ಯಾಪೋಷಕದ ದಾನಿಗಳು, ಸ್ವಯಂ ಸೇವಕರು, ವಿದ್ಯಾಪೋಷಕ ಸಮುದಾಯದ ಸದಸ್ಯರು ಹಾಗೂ ವಿದ್ಯಾಪೋಷಕ ಸಿಬ್ಬಂದಿಗಳು ಭಾಗಿಯಾಗಿದ್ದರು.




# ಜಿಪಿಟಿ ಸಂಘದ ತಾಲೂಕು ಅಧ್ಯಕ್ಷರಾಗಿ ಪ್ರಭುರಾಜ ನಾಯಕರ ಅವಿರೋಧ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಕರ್ನಾಟಕ ರಾಜ್ಯ (6–8) ಪದವೀಧರ ಪ್ರಾಥಮಿಕ ಶಿಕ್ಷಕರ ಸಂಘದ ಗಜೇಂದ್ರಗಡ ತಾಲೂಕು ಘಟಕದ 2026–2031ನೇ ಸಾಲಿನ ಅಧ್ಯಕ್ಷರಾಗಿ ನಾಗೇಂದ್ರಗಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಪ್ರಭುರಾಜ ನಾಯಕರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಶುಕ್ರವಾರ ನಡೆಯಿತು. ತಾಲೂಕಿನ ವಿವಿಧ ಶಾಲೆಗಳ ಶಿಕ್ಷಕ ಪ್ರತಿನಿಧಿಗಳು ಭಾಗವಹಿಸಿ, ಪ್ರಭುರಾಜ ನಾಯಕರ ಅವರನ್ನು ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆ ಮಾಡಿದರು. ಇದೇ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿಯಾಗಿ ಬಿ.ವಿ. ಅಂಗಡಿ ಹಾಗೂ ಖಜಾಂಚಿಯಾಗಿ ಹುಸೇನಸಾಹೇಬ ಬಾಗವಾನ ಅವರನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಪ್ರಭುರಾಜ ನಾಯಕರ, ತಮ್ಮ ಮೇಲೆ ವಿಶ್ವಾಸವಿಟ್ಟು ಸಂಘದ ಜವಾಬ್ದಾರಿ ನೀಡಿದ ತಾಲೂಕಿನ ಎಲ್ಲ ಶಿಕ್ಷಕ ಬಂಧುಗಳಿಗೆ ಕೃತಜ್ಞತೆ ಸಲ್ಲಿಸಿದರು. ಶಿಕ್ಷಕರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವುದು, ಶಿಕ್ಷಕರ ಹಕ್ಕು ಮತ್ತು ಗೌರವವನ್ನು ಕಾಪಾಡುವುದು ಹಾಗೂ ಸಂಘವನ್ನು ಒಗ್ಗಟ್ಟಿನಿಂದ ಮುನ್ನಡೆಸುವುದು ತಮ್ಮ ಪ್ರಮುಖ ಆದ್ಯತೆಯಾಗಿದೆ ಎಂದು ಹೇಳಿದರು.

# ಬ್ರೈಟ್ ಬಿಗಿನಿಂಗ್ ಶಾಲೆಯಲ್ಲಿ ಗಾಂಧೀಜಿ, ಶಾಸ್ತ್ರಿ ಜಯಂತಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ನಗರ ಸಮೀಪದ ಸೈನಿಕ ನಗರ ಹತ್ತಿರ ಇರುವ ಬ್ರೈಟ್ ಬಿಗಿನಿಂಗ್ ಆಂಗ್ಲ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಶುಕ್ರವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಗೆ ಇಬ್ಬರು ಮಹನೀಯರ ಜೀವನ, ದೇಶಸೇವೆ ಹಾಗೂ ಅವರು ಪ್ರತಿಪಾದಿಸಿದ ಮೌಲ್ಯಗಳ ಕುರಿತು ತಿಳಿಸಲಾಯಿತು.

ಬ್ರೈಟ್ ಎಜ್ಯುಕೇಷನ್ ಟ್ರಸ್ಟ್‌ನ ಅಧ್ಯಕ್ಷೆ ಎನ್.ಎಂ. ಮುದಗಲ್ಲ ಮಾತನಾಡಿ, ಮಹಾತ್ಮ ಗಾಂಧೀಜಿ ಅವರು ಸತ್ಯ ಮತ್ತು ಅಹಿಂಸೆಯ ಮಾರ್ಗದ ಮೂಲಕ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ತೋರಿಸಿದ ಮಹಾನ್ ನಾಯಕರು. ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳತೆ, ಪ್ರಾಮಾಣಿಕತೆ ಮತ್ತು ದೇಶಭಕ್ತಿಗೆ ಹೆಸರಾದವರು. ಇಂತಹ ಮಹನೀಯರ ಜೀವನಾದರ್ಶಗಳನ್ನು ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಟ್ರಸ್ಟ್‌ನ ಕಾರ್ಯದರ್ಶಿ ಸೀತಲ ಓಲೇಕಾರ ಮಾತನಾಡಿ, ಮಕ್ಕಳಿಗೆ ಕೇವಲ ಪಠ್ಯಪುಸ್ತಕದ ಶಿಕ್ಷಣ ನೀಡುವುದಷ್ಟೇ ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯಲ್ಲ. ದೇಶಕ್ಕಾಗಿ ದುಡಿದ ಮಹನೀಯರ ಜೀವನ ಹಾಗೂ ಆದರ್ಶಗಳನ್ನು ಪರಿಚಯಿಸುವ ಮೂಲಕ ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಶಿಸ್ತು, ಪ್ರಾಮಾಣಿಕತೆ ಮತ್ತು ದೇಶಪ್ರೇಮದ ಮನೋಭಾವ ಬೆಳೆಸಬೇಕು. ಗಾಂಧೀಜಿ ಅವರ ಸ್ವಚ್ಛತೆ, ಸತ್ಯ ಮತ್ತು ಅಹಿಂಸೆಯ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಶಾಸ್ತ್ರಿ ಅವರ ಸರಳ ಜೀವನ ಮತ್ತು ಕರ್ತವ್ಯನಿಷ್ಠೆ ವಿದ್ಯಾರ್ಥಿಗಳಿಗೆ ಮಾದರಿಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಸಿಬ್ಬಂದಿಗಳಾದ ತವಸೀನಬಾನು ಕರ್ನಾಚಿ, ನಸ್ರೀನ ಮುಧೋಳ, ಸಂಗಮೇಶ ರೇವಡಿ, ರವಿಚಂದ್ರ ನಿಡಗುಂದಿ, ಶಾಂತಮ್ಮ ಮುದುಟಗಿಮಠ, ಶಾಂತಾ ಸೋರೆಬಾನ, ಅಂಜುಮ ಹಂಪಿಹೊಳಿ ಸೇರಿದಂತೆ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.




# ರೈತ, ಗಾಂಧೀಜಿ, ಶಾಸ್ತ್ರಿ ತತ್ವಗಳೇ ದೇಶದ ಪ್ರಗತಿಯ ಜೀವಾಳ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ರೈತರು ದೇಶದ ಬೆನ್ನೆಲುಬಾಗಿದ್ದು, ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ ತತ್ವ, ಆದರ್ಶಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿವೆ ಎಂದು ರೈತ ಸಂಘದ ಅಧ್ಯಕ್ಷ ಶರಣಪ್ಪ ಧರ್ಮಾಯತ ಹೇಳಿದರು.

ಇಲ್ಲಿನ ಸೈಬರ್ ಟೆಕ್ ಕಂಪ್ಯೂಟರ್ ತರಬೇತಿ ಕೇಂದ್ರದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹಾದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗಾಂಧೀಜಿ ಅವರ ಸತ್ಯ, ಅಹಿಂಸೆ, ಸರಳ ಜೀವನ, ಸ್ವದೇಶಿ ಹಾಗೂ ಸ್ವಾವಲಂಬನೆಯ ಚಿಂತನೆಗಳನ್ನು ಪ್ರತಿಯೊಬ್ಬರೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಗಾಂಧೀಜಿ ಗ್ರಾಮೀಣ ಭಾರತದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದರು. ಗ್ರಾಮಗಳು ಅಭಿವೃದ್ಧಿಯಾದಾಗ ಮಾತ್ರ ದೇಶದ ಸಮಗ್ರ ಪ್ರಗತಿ ಸಾಧ್ಯ ಎಂಬ ಅವರ ಚಿಂತನೆ ಇಂದಿಗೂ ಪ್ರಸ್ತುತವಾಗಿದೆ. ಯುವಜನತೆ ಅವರ ಸರಳತೆ, ಸತ್ಯನಿಷ್ಠೆ ಹಾಗೂ ಅಹಿಂಸೆಯ ಸಂದೇಶಗಳನ್ನು ಅರಿತು ಜೀವನದಲ್ಲಿ ಪಾಲಿಸಬೇಕು ಎಂದು ಹೇಳಿದರು.

ಲಾಲ್ ಬಹಾದ್ದೂರ್ ಶಾಸ್ತ್ರಿ ಅವರು ಸೈನಿಕರು ಹಾಗೂ ರೈತರ ಮಹತ್ವವನ್ನು ಸಾರಲು 'ಜೈ ಜವಾನ್, ಜೈ ಕಿಸಾನ್' ಎಂಬ ಘೋಷಣೆ ನೀಡಿದ್ದರು. ದೇಶದ ಗಡಿಯನ್ನು ಕಾಯುವ ಸೈನಿಕರು ಹಾಗೂ ಜನರಿಗೆ ಅನ್ನ ನೀಡುವ ರೈತರು ರಾಷ್ಟ್ರದ ಎರಡು ಪ್ರಮುಖ ಶಕ್ತಿಗಳಾಗಿದ್ದಾರೆ. ಬಿಸಿಲು–ಮಳೆ ಎನ್ನದೆ ದುಡಿಯುವ ರೈತರ ಪರಿಶ್ರಮವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಸೈಬರ್ ಟೆಕ್ ಕಂಪ್ಯೂಟರ್ ತರಬೇತಿ ಕೇಂದ್ರದ ಮುಖ್ಯಸ್ಥ ವಿರೂಪಾಕ್ಷಪ್ಪ ಸಂಗನಾಳ ಮಾತನಾಡಿ, ರೈತರು ದೇಶದ ಜೀವನಾಡಿಯಾಗಿದ್ದು, ರೈತರು ಸಮೃದ್ಧರಾದರೆ ದೇಶವೂ ಸಮೃದ್ಧವಾಗುತ್ತದೆ. ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ ತತ್ವ□ಆದರ್ಶಗಳು ದೇಶದ ಪ್ರಗತಿ ಹಾಗೂ ಸ್ವಾಭಿಮಾನದ ಸಂಕೇತಗಳಾಗಿವೆ. ಇಂದಿನ ಪೀಳಿಗೆ ಅವರ ಮೌಲ್ಯಗಳನ್ನು ಅರಿತು ಮುನ್ನಡೆಯಬೇಕು ಎಂದರು. ಚನ್ನಪ್ಪ ಹೊನ್ನವಾಡ ಮಾತನಾಡಿ, ಲಾಲ್ ಬಹಾದ್ದೂರ್ ಶಾಸ್ತ್ರಿ ಅವರು ಸೈನಿಕರ ಶೌರ್ಯ ಹಾಗೂ ರೈತರ ಪರಿಶ್ರಮಕ್ಕೆ ಅಪಾರ ಗೌರವ ನೀಡುತ್ತಿದ್ದರು. 'ಜೈ ಜವಾನ್, ಜೈ ಕಿಸಾನ್' ಘೋಷಣೆಯ ಮೂಲಕ ದೇಶದ ರಕ್ಷಣೆಯಲ್ಲಿ ಸೈನಿಕರ ಹಾಗೂ ಆಹಾರ ಉತ್ಪಾದನೆಯಲ್ಲಿ ರೈತರ ಪಾತ್ರವನ್ನು ಸಾರಿದರು. ರೈತರ ಅಭಿವೃದ್ಧಿಗೆ ಸಮಾಜ ಹಾಗೂ ಸರ್ಕಾರ ಅಗತ್ಯ ಸಹಕಾರ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ತರಬೇತಿ ಕೇಂದ್ರದ ರವಿ ಶಿವಶಿಂಪರ, ಲಕ್ಷ್ಮೀ ಹೊಟ್ಟಿನ, ಅಂದಯ್ಯ ಹಿರೇಮಠ ಸೇರಿದಂತೆ ತರಬೇತಿ ಕೇಂದ್ರದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

SATY MITHI
Kannada Daily Morning

## ಗಾಂಧೀಜಿ ತತ್ವಗಳ ಪಾಲನೆ ಅಗತ್ಯ: ವಿನಾಯಕ ಜರತಾರಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ನಗರದ ಕುಷ್ಟಗಿ ರಸ್ತೆಯ ಚನ್ನಮ್ಮ ವೃತ್ತದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಕರ್ನಾಟಕ ಅಭಿವೃದ್ಧಿ ವೇದಿಕೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು.

ಕರ್ನಾಟಕಅಭಿವೃದ್ಧಿವೇದಿಕೆಯಸಂಸ್ಥಾಪಕಅಧ್ಯಕ್ಷವಿನಾಯಕ ಜರತಾರಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರು ಸತ್ಯ, ಅಹಿಂಸೆ ಹಾಗೂ ಸರಳತೆಯ ಮೂಲಕ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ನೀಡಿದರು. ಗಾಂಧೀಜಿ ಅವರ ಆದರ್ಶಗಳು ಇಂದಿಗೂ ಪ್ರಸ್ತುತವಾಗಿದ್ದು, ಯುವಜನತೆ ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ನಗರ ಘಟಕದ ಅಧ್ಯಕ್ಷ ರವಿ ಗೂಗಲೋತರ, ಉಪಾಧ್ಯಕ್ಷ ಕಳಕೇಶ ರಾಠೋಡ, ಬದ್ರಿನಾಥ ರಾಠೋಡ, ಬಸವರಾಜ, ಕಿರಣ್, ರಾಜು, ಸುರೇಶ, ಯಮನೂರಪ್ಪ, ಹನುಮಂತ ಗೌಡ್ರು ಸೇರಿದಂತೆ ವೇದಿಕೆಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



## ಕೊಪ್ಪಳ ಜಿಲ್ಲಾಡಳಿತ ಭವನದ ಆವರಣದಲ್ಲಿ ಅಧಿಕಾರಿಗಳು, ಸಿಬ್ಬಂದಿಯಿಂದ ಶ್ರಮದಾನ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಆಚರಣೆ ಪ್ರಯುಕ್ತ ಅಕ್ಟೋಬರ್ 01ರಂದು ಶ್ರಮದಾನ ಕಾರ್ಯಕ್ರಮವು ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆಯಿತು.

ಗಾಂಧೀಜಿಯವರು ಸಾರಿದ ಶ್ರಮ ಸಂಸ್ಕೃತಿ ಮತ್ತು ಸ್ವಚ್ಛತೆ-ಯ ಮಹತ್ವ ಸಾರುವ ಉದ್ದೇಶದಿಂದ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರ ಮಾರ್ಗದರ್ಶನದಲ್ಲಿ ನಡೆದ ಶ್ರಮದಾನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಬೆಳಗ್ಗೆ ಕಚೇರಿ ಕೆಲಸ ಮುಗಿಸಿ ಸಂಜೆ ವೇಳೆಗೆ ಶ್ರಮದಾನದಲ್ಲಿ ಭಾಗಿಯಾದ ಅಧಿಕಾರಿಗಳು ಮತ್ತು ಸಿಬ್ಬಂದಿಯು ಕಸಬಾರಿಗೆ, ಸಲಿಕೆ, ಬುಟ್ಟಿ ಹಿಡಿದು ಪೌರ ಕಾರ್ಮಿಕರೊಂದಿಗೆ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗಿಯಾದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಪ್ಪಳ ನಗರಸಭೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರಮದಾನ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಅವರು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ಸ್ವಚ್ಛತೆಯು ಕೇವಲ ಒಂದು ದಿನದ ಆಚರಣೆಯಾಗದೆ ನಮ್ಮ ಜೀವನದ ಮೂಲ ಧ್ಯೇಯವಾಗಬೇಕು. ನಮ್ಮ ಮನೆಯಿಂದ ಆರಂಭವಾಗುವ ಸ್ವಚ್ಛತಾ ಕಾರ್ಯದ ಸಂದೇಶವು ನಮ್ಮ ಕಚೇರಿ ಹಾಗೂ ಇಡೀ ಸಮಾಜಕ್ಕೆ ವಿಸ್ತರಿಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿಗಳಿಂದ ಮೆಚ್ಚುಗೆ: ಗಾಂಧೀ ಜಯಂತಿಯ ಅಂಗವಾಗಿ ನಡೆದ ಶ್ರಮದಾನ ಕಾರ್ಯಕ್ರಮದಲ್ಲಿ ಭಾಗಿಯಾದ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು, ಸ್ವಚ್ಛತಾ ಕಾರ್ಯದಲ್ಲಿ ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯವೈಖರಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ನಗರಸಭೆಯಿಂದ ಇನ್ನು ಹೆಚ್ಚಿನ ರೀತಿಯಲ್ಲಿ ಸ್ವಚ್ಛತಾ ಕಾರ್ಯಗಳು ನಡೆಯುವಂತಾಗಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ನಗರಸಭೆಯ ಅಧಿಕಾರಿಗಳಿಗೆ ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಸಹಾಯಕ ಆಯುಕ್ತರಾದ ಮಹೇಬೂಬ್ ಜೀಲಾನಿ ಖು-ರೇಶಿ, ಪೌರಾಯುಕ್ತರಾದ ಮಂಜುನಾಥ ಗುಂಡೂರು, ಜಿಲ್ಲಾ ವಾರ್ತಾಧಿಕಾರಿಗಳಾದ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ನಗರಸಭೆಯಿಂದ ಸಹಕಾರ: ಶ್ರಮದಾನದಲ್ಲಿ ಭಾಗಿಯಾದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನಗರಸಭೆಯಿಂದ ಹ್ಯಾಂಡ್ ಗ್ಲೌಸ್, ಮಾಸ್ಕ ವಿತರಣೆ, ಕ್ಯಾಪ್ ವಿತರಣೆ ಮಾಡಲಾಯಿತು. ಸ್ವಚ್ಛತಾ ಕಾರ್ಯಕ್ರಮಕ್ಕೆ ಸಲಿಕೆ, ಕಸಬಾರಿಗೆ ಸೇರಿದಂತೆ ಸ್ವಚ್ಛತೆಗೆ ಬೇಕಾಗುವ ಪರಿಕರಗಳನ್ನು ಸಹ ನಗರಸಭೆಯಿಂದ ಪೂರೈಸಲಾಯಿತು.ಪೌರಕಾರ್ಮಿಕರನ್ನುಮತ್ತುಕಸವಿಲೇವಾರಿ ವಾಹನಗಳನ್ನು ಒದಗಿಸಿ ನಗರಸಭೆ ಪೌರಾಯುಕ್ತರು ಈ ಕಾರ್ಯಕ್ರಮಕ್ಕೆ ಅಗತ್ಯ ಸಹಕಾರ ನೀಡಿದರು.




## ಬಿಜೆಪಿ ಕಚೇರಿಯಲ್ಲಿ ಗಾಂಧಿ, ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ :**
ದೇಶದ ಸ್ವಾತಂತ್ರ್ಯ ಹೋರಾಟ, ಸತ್ಯ, ಅಹಿಂಸೆ ಮತ್ತು ಪ್ರಾಮಾಣಿಕತೆಗೆ ಗಾಂಧೀಜಿಯವರು ಮಾದರಿಯಾದರೆ, ಪ್ರಬುದ್ಧತೆ ಹಾಗೂ ದಕ್ಷ ಆಡಳಿತಕ್ಕೆ ಲಾಲ್ ಬಹದ್ದೂರ್ ಶಾಸ್ತ್ರಿಯವರು ಹೆಸರುವಾಸಿಯಾಗಿದ್ದಾರೆ ಎಂದು ಬಿಜೆಪಿ ನಗರ ಘಟಕದ ಅಧ್ಯಕ್ಷರಾದ ರಾಜೇಂದ್ರ ಘೋರ್ಪಡೆ ನುಡಿದರು.

ನಗರದ ಮಾಜಿ ಸಚಿವ ಕಳಕಪ್ಪ ಬಂಡಿ ಅವರ ಗೃಹ ಕಚೇರಿಯಲ್ಲಿ ಶುಕ್ರವಾರ ಭಾರತೀಯ ಜನತಾ ಪಾರ್ಟಿ ರೋಣ ಮಂಡಲದ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತ್ಯುತ್ಸವ ಆಚರಣೆ ಸಂದರ್ಭದಲ್ಲಿ ಮಾತನಾಡುತ್ತ,ಈ ಇಬ್ಬರೂ ಮಹಾನ್ ನಾಯಕರು ತಮ್ಮ ತತ್ವ-ಸಿದ್ಧಾಂತಗಳ ಮೂಲಕ ಇಂದಿಗೂ ನಮ್ಮೊಂದಿಗೆ ಅಮರವಾಗಿದ್ದಾರೆ. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು," ಎಂದು ಕರೆ ನೀಡಿದರು.

ಮಹಾನ್ ನಾಯಕರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಅತ್ಯಂತ ಶ್ರದ್ಧಾ-ಭಕ್ತಿ ಹಾಗೂ ವಿಜೃಂಭಣೆಯಿಂದ ಮಹನೀಯರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪಕ್ಷದ ಪ್ರಮುಖರಾದ ವೀರಣ್ಣ ಪಟ್ಟಣಶೆಟ್ಟಿ, ಬಸಣ್ಣ ಕಡಬಲಕಟ್ಟಿ, ಮಹಾಂತೇಶ ಪೂಜಾರ, ಕುಮಾರ ರಾಠೋಡ, ಬಾಳನಗೌಡ ಗೌಡ್ರು, ರಂಗನಾಥ ಮೇಟಿ, ಲಕ್ಷ್ಮಣ ಬಂಕದ ಸೇರಿದಂತೆ ಹಲವು ಹಿರಿಯ ಮುಖಂಡರು, ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.



## ಮಹಾತ್ಮರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆಯೋಣ: ಸೋಂಪುರ್

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಾನದ ವತಿಯಿಂದ ನಗರದ ಕಾಲಕಾಲೇಶ್ವರ ವೃತ್ತದಲ್ಲಿ ಶುಕ್ರವಾರ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಜಿ ಅವರ ಜಯಂತಿಯನ್ನು ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಜಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ಅವರ ದೇಶಸೇವೆ, ಸರಳತೆ ಹಾಗೂ ಆದರ್ಶಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಚ್.ಎಸ್. ಸೊಂಪೂರ, "ಮಹಾತ್ಮರ ಸನ್ಮಾರ್ಗದಲ್ಲಿ ನಾವು ನಡೆಯಬೇಕು. ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ನಾವೆಲ್ಲಾ ಒಂದು ಎನ್ನುವ ಭಾವನೆಯಿಂದ ಬದುಕನ್ನ ಕಟ್ಟಿಕೊಳ್ಳಬೇಕಾಗಿದೆ. ನಾವೆಲ್ಲಾ ಒಂದೇ ತಾಯಿಯ ಮಕ್ಕಳು ಎಂಬ ಭಾವನೆಯೊಂದಿಗೆ ನವ ಭಾರತವನ್ನು ಕಟ್ಟೋಣ. ಮಹಾತ್ಮ ಗಾಂಧೀಜಿ ಅವರು ಸತ್ಯ, ಅಹಿಂಸೆ ಹಾಗೂ ಶಾಂತಿಯ ಮಾರ್ಗದ ಮೂಲಕ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕು ನೀಡಿದರು. ಲಾಲ್ ಬಹದ್ದೂರ್ ಶಾಸ್ತ್ರಿಜಿ ಅವರು ಸರಳತೆ, ಪ್ರಾಮಾಣಿಕತೆ ಮತ್ತು ದೇಶಭಕ್ತಿಗೆ ಮಾದರಿಯಾಗಿದ್ದರು. ಅವರ ಆದರ್ಶಗಳನ್ನು ಯುವಜನತೆ ಜೀವನದಲ್ಲಿ ಅಳವಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿವಕುಮಾರ ಚವ್ಹಾಣ, ಶಶಿಧರ ಹೂಗಾರ, ಸುಭಾಷ ಮ್ಯಾಗೇರಿ, ರಾಜು ಸಾಂಗ್ಲೀಕರ, ಬಸವರಾಜ ಬಂಕದ, ಶರಣಪ್ಪ ಉಪ್ಪಿನಬೇಟಗೇರಿ, ಪಾಷಾ ಗಂಗಾವತಿ, ಬಾಷಾ ಮುದಗಲ್, ಬಾಷೇಸಾಬ ಕರ್ನಾಚಿ, ಶಶಿಧರ ವಕ್ಕಲದ, ಶಿವಕುಮಾರ ಕಲ್ಲುಗಿಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪ್ರತಿಯೊಬ್ಬರೂ ತಮ್ಮ ಸುತ್ತಲಿನ ಪರಿಸರದ ಸ್ವಚ್ಛತೆಗೆ ಪ್ರಯತ್ನಿಸಬೇಕು: ಶಿವಾನಂದ ಪತ್ತಾರ

**ಸತ್ಯಮಿಥ್ಯ ಸುದ್ದಿಮೂಲ ಬೆಟಗೇರಿ:**
ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ಪ್ರತಿಯೊಬ್ಬರೂ ತಮ್ಮ ಸುತ್ತಲಿನ ಪರಿಸರದ ಸ್ವಚ್ಛತೆಗೆ ಪ್ರಯತ್ನಿಸಬೇಕು. ಸ್ಥಳೀಯ ಸಾರ್ವಜನಿಕ ಸ್ಥಳಗಳಲ್ಲಿ ಕಸ ಮತ್ತು ತ್ಯಾಜ್ಯ ವಸ್ತುಗಳನ್ನು ಎಲ್ಲಿ ಬೇಕಾದಲ್ಲಿ ಎಸೆಯಬಾರದು. ಕಸದ ತೊಟ್ಟಿಗಳಲ್ಲಿಯೇ ಕಸ ಮತ್ತು ತ್ಯಾಜ್ಯ ವಸ್ತುಗಳನ್ನು ಹಾಕಬೇಕು ಎಂದು ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮ ಪಂಚಾಯ್ತಿ ಪಿಡಿಒ ಶಿವಾನಂದ ಪತ್ತಾರ ಹೇಳಿದರು.



ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮ ಪಂಚಾಯ್ತಿ ಸಹಯೋಗದಲ್ಲಿಅ.1ರಂದುನಡೆದಸ್ವಚ್ಛತಾಹೀಸೇವಾ ಸ್ವಚ್ಛತೆಯೇ ಸೇವೆ ಅಭಿಯಾನದ ಪ್ರಯುಕ್ತ ಒಂದು ದಿನ, ಒಂದು ಗಂಟೆ, ಎಲ್ಲರೂ ಒಟ್ಟಿಗೆ ಶ್ರಮದಾನದ ಘೋಷ ವಾಕ್ಯದಡಿ ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಸ್ಥಳೀಯ ಮನೆ, ಅಂಗಡಿ, ಮುಂಗಟ್ಟುದಾರ ಹಾಗೂ ಸ್ಥಳೀಯರು ಹಸಿ ಮತ್ತು ಒಣ ಕಸಗಳನ್ನು ಬೇರೆ ಬೇರೆ ಮಾಡಿ ಕಸ ತುಂಬುವ ವಾಹನ ತಮ್ಮ ಬಳಿ ಬಂದಾಗ ವಾಹನದಲ್ಲಿ ಹಾಕಬೇಕು. ಸ್ಥಳೀಯರು ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು ಎಂದರು. ಸ್ಥಳೀಯ ಗ್ರಾಪಂ ಪಿಡಿಒ ಶಿವಾನಂದ ಪತ್ತಾರ ಮತ್ತು ಗ್ರಾಪಂ ಎಲ್ಲಾ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು ಕೈಯಲ್ಲಿ ಕಸಬರಿಗೆ ಹಿಡಿದು ಸ್ವತಾ ಒಂದು ದಿನ, ಒಂದು ಗಂಟೆ, ಎಲ್ಲರೂ ಒಟ್ಟಿಗೆ ಸೇರಿ ಬೆಟಗೇರಿ ಗ್ರಾಮದ ವಿವಿಧಡೆ ಪ್ರಮುಖ ಸ್ಥಳಗಳಲ್ಲಿ ಕಸಗೂಡಿಸುವ ಸ್ವಚ್ಛತಾ ಕಾರ್ಯ ನಡೆಯಿತು. ಈ ವೇಳೆ ಸ್ಥಳೀಯ ಹಲವು ಸ್ಥಳಗಳಲ್ಲಿ ಕಸ ಹಾಗೂ ತ್ಯಾಜ್ಯ ವಸ್ತುವನ್ನು ಕಸ ತುಂಬುವ ವಾಹನದಲ್ಲಿ ತುಂಬಿ ಕಸ ವಿಲೇವಾರಿ ಸ್ಥಳಕ್ಕೆ ಸಾಗಿಸಲಾಯಿತು. ಸ್ಥಳೀಯ ಗ್ರಾಮ ಪಂಚಾಯತಿ ಸಿಬ್ಬಂದಿ, ಆಶಾ ಅಂಗನವಾಡಿ ಕಾರ್ಯಕರ್ತೆಯರು, ಸ್ಥಳೀಯರು ಸ್ವಚ್ಛತೆ ಕುರಿತು ಪ್ರಮಾಣ ವಚನ ಮಾಡಿದರು.

ಇಲ್ಲಿಯ ಗ್ರಾಪಂ ಕಾರ್ಯದರ್ಶಿ ಎಮ್.ಪಿ.ತಳವಾರ, ಬಸವರಾಜ ಪಣದಿ, ರಮೇಶ ನೀಲಣ್ಣವರ, ಈಶ್ವರ ಮುಧೋಳ, ನಾಗಪ್ಪ ಜಾನಕಿ, ವಿಠಲ ಚಂದರಗಿ, ಶಿವಾನಂದ ಐದುಡ್ಡಿ, ಈರಣ್ಣ ದಂಡಿನ, ಮೇಳೆಪ್ಪ ಹರಿಜನ, ಸಾಂವಕ್ಕ ಹರಿಜನ, ಗ್ರಾಪಂ ಎಲ್ಲಾ ಸಿಬ್ಬಂದಿ, ಸ್ಥಳೀಯ ಆಶಾ ಮತ್ತು ಅಂಗನವಾಡಿ ಕಾರ್ಯಕತೆ-ಯರು ಸೇರಿದಂತೆ ಗ್ರಾಪಂ ಸಿಬ್ಬಂದಿ, ಸ್ಥಳೀಯರು ಇದ್ದರು.

# 17 ವರ್ಷಗಳ ಸೈನ್ಯ ಸೇವೆ ಬಳಿಕ ತಾಯ್ನಾಡಿಗೆ ರಹಿಮಾನ ಹೆಬ್ಬಳ್ಳಿ

### ಶಾಲಾ ಮಕ್ಕಳು, ಹಿರಿಯರು, ಮಹಿಳೆಯರು ಸಾಥ್ ಅದ್ದೂರಿ ಮೆರವಣಿಗೆ, ಸ್ವಾಗತ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ತಾಲ್ಲೂಕಿನ ಹುಯಿಲಗೋಳ ಗ್ರಾಮದ ನಿವಾಸಿ, ಭಾರತೀಯ ಸೈನ್ಯದಲ್ಲಿ 17 ವರ್ಷಗಳ ಕಾಲ ಸಲ್ಲಿಸಿದ ಸೇವೆಯನ್ನು ಪೂರ್ಣಗೊಳಿಸಿ ಸ್ವಗ್ರಾಮಕ್ಕೆ ಆಗಮಿಸಿದ 'ನಾಯಕ' ರಹಿಮಾನ ಎಂ. ಹೆಬ್ಬಳ್ಳಿ ಅವರಿಗೆ ಗೆಳೆಯರ ಬಳಗ ಹಾಗೂ ಗ್ರಾಮಸ್ಥರು ಅದ್ದೂರಿಯಾಗಿ ಬರಮಾಡಿಕೊಂಡರು.



ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಬಳಿ ರಹಿಮಾನ ಎಂ.ಹೆಬ್ಬಳ್ಳಿ ಅವರು ಆಗಮಿಸುತ್ತಿದ್ದಂತೆ ಅಲ್ಲಿ ನೆರೆದಿದ್ದ ಶಾಲೆಯ ವಿದ್ಯಾರ್ಥಿಗಳು, ಶಾಲಾ ಶಿಕ್ಷಕ ವರ್ಗ, ಯುವಕರು, ಗ್ರಾಮಸ್ಥರು ಹಾಗೂ ಗೆಳೆಯರು ಹೂಮಳೆಗರೆದು ಸಂಭ್ರಮದಿಂದ ಸ್ವಾಗತಿಸಿದರು.

ಅಲ್ಲಿಂದ ತೆರೆದ ಜೀಪಿನಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಮನೆಯವರೆಗೆ ಕರೆದೊಯ್ದರು. ಮಾರ್ಗ ಮಧ್ಯೆ ನಾಡಕವಿ ಹುಯಿಲಗೋಳ ನಾರಾಯಣರಾವ್, ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ನಮನ ಸಲ್ಲಿಸಿದರು.

ಜೊತೆಗೆ ಗ್ರಾಮದ ಶ್ರೀ ಸೂಗೀರೇಶ್ವರ ದೇವಸ್ಥಾನ, ಶ್ರೀ ದುರ್ಗಾದೇವಿಯರ ದೇವಸ್ಥಾನ, ಶ್ರೀ ಮಾರುತಿ ದೇವಸ್ಥಾನಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ದರ್ಶನಾಶೀರ್ವಾದ ಪಡೆದರು.

ಮೆರವಣಿಗೆಯುದ್ದಕ್ಕೂ ವಿದ್ಯಾರ್ಥಿಗಳು, ಯುವಕರು ಭಾರತ ಮಾತಾ ಕೀ ಜೈ, ನಾಯಕ ರಹಿಮಾನ ಹೆಬ್ಬಳ್ಳಿಗೆ ಜಯವಾಗಲಿ ಎಂಬ ಘೋಷಣೆ ಮೊಳಗುತ್ತಿದ್ದವು.

ಹೆಜ್ಜೆ ಹಾಕಿ, ಕುಣಿದು ಕುಪ್ಪಳಿಸಿದ ವಿದ್ಯಾರ್ಥಿಗಳು, ಯುವಕರು: ಭಾರತೀಯ ಸೈನ್ಯದಲ್ಲಿ 17 ವರ್ಷಗಳ ಕಾಲ ಸಲ್ಲಿಸಿದ ಸೇವೆಯನ್ನು ಪೂರ್ಣಗೊಳಿಸಿ ಸ್ವಗ್ರಾಮಕ್ಕೆ ಆಗಮಿಸಿದ 'ನಾಯಕ' ರಹಿಮಾನ ಎಂ. ಹೆಬ್ಬಳ್ಳಿ ಅವರನ್ನು ಸ್ವಾಗತಿಸುವ ಮೆರವಣಿಗೆಯಲ್ಲಿ ಪ್ರಭಾತ ಪೇರಿ ನಡೆಸಿದ ಗ್ರಾಮದ ವಿದ್ಯಾರ್ಥಿಗಳು, ಯುವಕರು ಹೆಜ್ಜೆ ಹಾಕಿ ಸಂಭ್ರಮಿಸಿದರು.

ಗ್ರಾಮಸ್ಥರಿಂದ ಸನ್ಮಾನ: ಭಾರತೀಯ ಸೈನ್ಯದಲ್ಲಿ 17 ವರ್ಷಗಳಕಾಲಸಲ್ಲಿಸಿದಸೇವೆಯನ್ನುಪೂರ್ಣಗೊಳಿಸಿ ಸ್ವಗ್ರಾಮಕ್ಕೆ ಆಗಮಿಸಿದ 'ನಾಯಕ' ರಹಿಮಾನ ಎಂ. ಹೆಬ್ಬಳ್ಳಿ ಅವರಿಗೆ ಗ್ರಾಮದಲ್ಲಿ ವಿವಿಧೆಡೆ ಸನ್ಮಾನ ಮಾಡಿ, ಸ್ವಾಗತಿಸಿದರು. ದೇವಸ್ಥಾನ ಮಂಡಳಿಗಳು, ಪಂಚಾಯ್ತಿಯಿಂದ ಹಾಗೂ ಗೆಳೆಯರು, ಗ್ರಾಮಸ್ಥರು ಆಗಮಿಸಿ ಸನ್ಮಾನಿಸಿ, ಶುಭ ಕೋರಿದರು.

**ಭಾವುಕರಾದ ತಂದೆ**

**ಗದಗ: ತಮ್ಮ ಐದು ಜನ ಮಕ್ಕಳಲ್ಲಿ ನಾಲ್ವರು ಭಾರತೀಯ ಸೇನೆಯಲ್ಲಿದ್ದಾರೆ. ರಹಿಮಾನ ಸೇರಿ ಇದೀಗ ಇಬ್ಬರು ಮಕ್ಕಳು ಮಾಜಿ ಸೈನಿಕರಾಗಿದ್ದು, ಮತ್ತಿಬ್ಬರು ಇನ್ನೂ ಸೇವೆಯಲ್ಲಿದ್ದಾರೆ. ರಹಿಮಾನ ಅವರನ್ನು ಅವರ ಸ್ನೇಹಿತರು, ಗ್ರಾಮಸ್ಥರು ಅದ್ದೂರಿ ಮೆರವಣಿಗೆ ಮಾಡಿ ಸ್ವಾಗತಿಸಿದ್ದು ಬಹಳ ಖುಷಿ ತಂದಿದೆ. ಅವರ ಪ್ರೀತಿ ಬೆಲೆಕಟ್ಟಲಾಗದ್ದು ಎಂದು 'ಮಾಜಿ ಸೈನಿಕ' ರಹಿಮಾನ ಅವರ ತಂದೆ ಮೌಲಾಸಾಬ ಅವರು ಭಾವುಕರಾಗಿ ತಮ್ಮ ಅಭಿಪ್ರಾಯ ಹಂಚಿಕೊಂಡರು.**

ರಹಿಮಾನ ಹೆಬ್ಬಳ್ಳಿ ಅವರನ್ನು ಕುಟುಂಬಸ್ಥರು ಆರತಿ ಬೆಳಗಿ, ಮನೆಗೆ ಬರಮಾಡಿಕೊಂಡರು. ರಹಿಮಾನ ಎಂ. ಹೆಬ್ಬಳ್ಳಿ ಅವರು ಜಮ್ಮು-ಕಾಶ್ಮೀರ, ಪಂಜಾಬ, ರಾಜಸ್ಥಾನ ಸೇರಿ ದೇಶದ ವಿವಿಧ ಜಿಲ್ಲೆಗಳ ಗಡಿಯಲ್ಲಿ ಕಾರ್ಯನಿರ್ವಹಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಯುವಕರಾದ ಚಂದ್ರು ಹಂಚಿನಾಳ, ಮುತ್ತು ಪಡೇಸೂರ, ಚಂದ್ರು ಪೂಜಾರ, ಮಂಜುನಾಥ ಹುಯಿಲಗೋಳ, ಹುಸೇನಸಾಬ ಕುರಹಟ್ಟಿ, ಖಾದರಸಾಬ ಬೂದಿಹಾಳ, ಮಹಮ್ಮದಲಿ ಕೌತಾಳ,ರಮೇಶಹೊಸಮನಿ,ದೇವುಹುಯಿಲಗೋಳ, ಶಿವರಾಯಪ್ಪ ಯಲಿಗಾರ, ಜಗದೀಶ ಹೊಸಳ್ಳಿ, ಶರಣಪ್ಪ ಹುಯಿಲಗೋಳ, ಶರಣಪ್ಪ ಕಡಿಯವರ, ರಮೇಶ ಕಡಿಯವರ, ರಂಗನಾಥ ಕಡಿಯವರ, ಹೇಮಂತ ದಾಸರ, ಮುತ್ತು ಅಂಗಡಿ, ಮಹೇಶ ಹಾಳಕೇರಿ, ಮಹೇಶಗೌಡ ಪಾಟೀಲ, ಹುಚ್ಚನಗೌಡ ಪಾಟೀಲ, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ವಿಶ್ವನಾಥ ನಾಯ್ಕರ, ಡಿ.ಎಸ್. ದಿಡ್ಡಿಮನಿ ನೇತೃತ್ವದಲ್ಲಿ ಹಲವರು ಮಾಜಿ ಸೈನಿಕರು, ವೀರನಾರಿಯರು ಉಪಸ್ಥಿತರಿದ್ದರು.

**ಮಹಾಂತೇಶ ಕರಬಾಣದ ಸಾಥ್**

**ಗದಗ: ಭಾರತೀಯ ಸೇನೆಯಿಂದ ಕಳೆದ ವರ್ಷ ಸ್ವಗ್ರಾಮಕ್ಕೆ ಬಂದಿದ್ದ ಮಾಜಿ ಸೈನಿಕ ಮಹಾಂತೇಶ ಕರಬಾಣದ ಅವರನ್ನೂ ಸಹ ಗ್ರಾಮಸಸ್ಥರು ಹಾಗೂ ಯುವಕರು ಇದೇ ವೇಳೆ ಮೆರವಣಿಗೆ ಮೂಲಕ ಕರೆತಂದಿದ್ದು ವಿಶೇಷವಾಗಿತ್ತು.**

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114